MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 259 | ಬುಧವಾರ : 30-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 259 | WEDNESDAY : 30-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರೂ.5000 ಕೋಟಿ ಪ್ರಸ್ತಾವನೆಗೆ ರಾಜ್ಯಪಾಲರ ಅನುಮೋದನೆ: ಡಾ.ಅಜಯ್ ಧರಂಸಿಂಗ್



**ಕಲಬುರಗಿ,ಜು.29**–ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಜಿಲ್ಲೆಗಳಲ್ಲಿ ಮಾನವ ಅಭಿವೃದ್ಧಿ ಸೂಚ್ಯಂಕ ಒಳಗೊಂಡಂತೆ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧ್ಯಯನ ಕೈಗೊಳ್ಳುವುದರ ಭಾಗವಾಗಿ ನಂಜುಂಡಪ್ಪ ವರದಿ ಅಧ್ಯಯನ ಸಮಿತಿ ಅಧ್ಯಕ್ಷ ಪ್ರೋ.ಗೋವಿಂದರಾವ್ ನೇತೃತ್ವದ ಉನ್ನತ ಸಮಿತಿ ಆಗಸ್ಟ್ 7 ಹಾಗೂ 8ರಂದು ಕಲಬುರಗಿ ಜಿಲ್ಲೆಗೆ ಭೇಟಿ ನೀಡಲಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಕೆ.ಆರ್.ಡಿ.ಬಿ) ಅಧ್ಯಕ್ಷ ಡಾ.ಅಜಯ ಧರಂಸಿಂಗ್ ಹೇಳಿದರು.

ಕೆ.ಕೆ.ಆರ್.ಡಿ.ಬಿ ಸಭಾಂಗಣದಲ್ಲಿ ಕರೆದಿದ್ದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸಮಿತಿಯು ಈಗಾಗಲೇ ಜಿಲ್ಲಾವಾರು ಭೇಟಿ ಆರಂಭಿಸಿದೆ. ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಿಗೂ ಭೇಟಿ ನೀಡಿ, ಈ ವರ್ಷ ವರದಿ ಸಲ್ಲಿಸಲಿದೆ. ಈ ವರದಿ ಬಂದ ಬಳಿಕ ಅಗತ್ಯ ತೀರ್ಮಾನಗಳನ್ನು ಕೈಗೊಳ್ಳಲಾಗುವುದು ಎಂದರು.

ರಾಜ್ಯಪಾಲರ ಅನುಮೋದನೆ :2025-26ನೇ ಆರ್ಥಿಕ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಏಳು ಜಿಲ್ಲೆಗಳಲ್ಲಿ ಅಗತ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.5000 ಕೋಟಿ ಖರ್ಚು ಮಾಡಲು ಈಗಾಗಲೇ ರಾಜ್ಯಪಾಲ ಥಾವರ್‌ಚಂದ ಗೆಹಲೋಟ್ ಅನುಮೋದನೆ ನೀಡಿದ್ದಾರೆ ಎಂದು ಸಹ ಅಜಯಸಿಂಗ್ ಮಾಹಿತಿ ನೀಡಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದ ಅನುದಾನಕ್ಕೆ ಕ್ರಿಯಾ ಯೋಜನೆ ಸಿದ್ದಪಡಿಸಿ ಕಳೆದ ತಿಂಗಳು ರಾಜ್ಯಪಾಲರಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅತ್ಯಂತ ಕ್ಷಿಪ್ರಗತಿಯಲ್ಲಿ ರಾಜ್ಯಪಾಲರು ಅನುಮೋದನೆ ನೀಡಿದ್ದಾರೆ **(2ನೇಪುಟಕ್ಕೆ)**

# ಮುಖ್ಯಮಂತ್ರಿಗಳ ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಯಲಿ: ಜೆ.ಟಿ.ಪಾಟೀಲ್

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.29**– ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕರ ಹೊಸ ವಸತಿ ಸಮುಚ್ಚಯ ನಿರ್ಮಾಣದ ಶಂಕುಸ್ಥಾಪನೆಗೆ ಆಗಸ್ಟ 6ರಂದು ರಾಯಚೂರು ಜಿಲ್ಲೆಗೆ ಆಗಮಿಸಲಿರುವ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಆಗಿರುವ ಶಾಸಕರಾದ ಜೆ.ಟಿ. ಪಾಟೀಲ್ ಅವರು ಹೇಳಿದರು.

ಲಿಂಗಸೂರ ತಾಲೂಕಿನ ಹಟ್ಟಿಯಲ್ಲಿನ ಚಿನ್ನದ ಗಣಿ ಕಂಪನಿಯ ಸಭಾಂಗಣದಲ್ಲಿ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕರ ಹೊಸ ವಸತಿ ಸಮುಚ್ಚಯ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮದ ಬಗ್ಗೆ ಮಂಗಳವಾರ ಪೂರ್ವ ಭಾವಿ



ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಎಲ್ಲ ಜನ ಪ್ರತಿನಿಧಿಗಳು, ಗಣ್ಯರು ಮತ್ತು ಸಾರ್ವಜನಿಕರಿಗೆ ಆಸನ, ಊಟ, ಉಪಹಾರ, ಸಾರಿಗೆ ಸೇರಿದಂತೆ ಎಲ್ಲಾ ರೀತಿಯ ಸೌಕರ್ಯಕ್ಕೆ ಅಚ್ಚುಕಟ್ಟಾದ ವ್ಯವಸ್ಥೆ ಆಗಬೇಕು. ಕಾರ್ಯಕ್ರಮಕ್ಕೆ ಆಗಮಿಸಲಿರುವ ಅಂದಾಜು 15,000 ಜನರಿಗೆ ತೊಂದರೆಯಾಗದ ರೀತಿಯಲ್ಲಿ ಊಟದ ಸಿದ್ಧತೆ ಮತ್ತು ಕಾರ್ಯಕ್ರಮಕ್ಕೆ ಬಂದು ಹೋಗಲು ಸಾರಿಗೆ ವ್ಯವಸ್ಥೆಯಾಗಬೇಕು. ಕಾರ್ಯಕ್ರಮದ ಬಗ್ಗೆ ಸರಿಯಾದ ರೀತಿಯಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆಯಿಂದ ಮೇಲುಸ್ತುವಾರಿಯಾಗಬೇಕು ಎಂದು ತಿಳಿಸಿದರು.

ಮಾನ್ಯ ಮುಖ್ಯಮಂತ್ರಿಗಳಿಗೆ ಅಹವಾಲು ಸಲ್ಲಿಸಲು ಬರುವ ಅರ್ಜಿದಾರರು, ಸಾರ್ವಜನಿಕರು ಮತ್ತು ರೈತ ಕಾರ್ಮಿಕ ಮತ್ತು ಇನ್ನಿತರ ಮುಖಂಡರಿಗೆ ಅನುಕೂಲವಾಗುವಂತೆ ಅರ್ಜಿ ಸಲ್ಲಿಕೆ ಸ್ಥಳದಲ್ಲಿ ಬ್ಯಾರಿಕೇಡ್ ಅಳವಡಿಕೆ ಮಾಡಬೇಕು ಎಂದು ತಿಳಿಸಿದರು.

ಲಿಂಗಸುಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್ ಅವರು ಮಾತನಾಡಿ, ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಒಳಗೊಂಡು ಕೂಡಲೇ ಸಮಿತಿಗಳನ್ನು ರಚಿಸಿ ಕಾರ್ಯ ಹಂಚಿಕೆ ಮಾಡಬೇಕು. ಹೆಚ್ಚಿನ ಸಂಖ್ಯೆಯಲ್ಲಿ **(2ನೇಪುಟಕ್ಕೆ)**

## ಹಟ್ಟಿ ಚಿನ್ನದ ಗಣಿ ಪ್ರದೇಶದಲ್ಲಿ 998 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಮುಖ್ಯಮಂತ್ರಿಗಳಿಂದ ಆ.6ರಂದು ಶಂಕುಸ್ಥಾಪನೆ

**ಯುವ ಮಾರ್ಗ ಸುದ್ದಿ**

**'ರಾಯಚೂರು,ಜು.29**– 998 ಕೋಟಿ ರೂ ವೆಚ್ಚದಲ್ಲಿ ಹಟ್ಟಿ ಚಿನ್ನದ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕರ ಹೊಸ ವಸತಿ ಸಮುಚ್ಚಯ ನಿರ್ಮಾಣ ಸೇರಿದಂತೆ ನಾನಾ ಅಭಿವೃದ್ಧಿ ಕಾರ್ಯಗಳಿಗೆ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಆಗಸ್ಟ್ 6ರಂದು ಹಟ್ಟಿ ಚಿನ್ನದ ಗಣಿ ಪ್ರದೇಶದಲ್ಲಿ ಶಂಕುಸ್ಥಾಪನೆಯನ್ನು ನೆರವೇರಿಸಲಿದ್ದಾರೆ ಎಂದು ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಟಿ. ಪಾಟೀಲ ಅವರು ಹೇಳಿದರು.

ಲಿಂಗಸುಗೂರು ತಾಲೂಕಿನ ಹಟ್ಟಿಯ ಚಿನ್ನದ ಗಣಿ ಕಂಪನಿಯ ಸಭಾಂಗಣದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಹಟ್ಟಿಯಲ್ಲಿ ಗಣಿ ಸಿಬ್ಬಂದಿ ಹಾಗೂ ಕಾರ್ಮಿಕರ ಹೊಸ ವಸತಿ ಸಮುಚ್ಚಯ ನಿರ್ಮಾಣಕ್ಕೆ ಕರ್ನಾಟಕ ಸರ್ಕಾರದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಸಿಕ್ಕಿದೆ. ಅಂದಾಜು 998 ಕೋಟಿ ರೂ ವೆಚ್ಚದಲ್ಲಿ ವಸತಿ ಗೃಹಗಳು, ಶಾಲೆ, ಆಸ್ಪತ್ರೆ, ಕ್ರೀಡಾ



ಸಂಕೀರ್ಣ ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳು ಆಗಲಿವೆ.

2 ಬಿಎಚ್ ಕೆಯ 16 ಕ್ವಾರ್ಟರ್‌ಗಳ 1 ಬ್ಲಾಕ್ ನಿರ್ಮಾಣವಾಗಲಿದೆ. ಇದರಲ್ಲಿ ಲಿಫ್ಟ್ ಎಲಿವೇಟರನಂತಹ ಬೇರೆ ಬೇರೆ ಆಧುನಿಕ ಸೌಲಭ್ಯಗಳು ಇರಲಿವೆ. ಅದೇ ರೀತಿಯಲ್ಲಿ 3 ಬಿಎಚ್ ಕೆ ರೆಸಿಡೆಂಟಲ್ ಹೌಸಗಳು ನಿರ್ಮಾಣವಾಗಲಿವೆ. 16 ಕ್ವಾಟರ್‌ಗಳ ಈ ಬ್ಲಾಕನಲ್ಲಿ ಸಹ ಲಿಫ್ಟ್, ಎಲಿವೇಟರ್ ಸೌಲಭ್ಯ ಇರುತ್ತದೆ. ಅದೇ ರೀತಿ ನೆಲ ಮತ್ತು ಎರಡು ಮಹಡಿಯ 130 ಹಾಸಿಗೆಗಳ ಆಸ್ಪತ್ರೆ ನಿರ್ಮಾಣ ವಾಗಲಿದೆ. ಇದರಲ್ಲಿ ಸಮಾಲೋಚಕರ ಕೊಠಡಿಗಳು, ರಕ್ತದ ಮಾದರಿ ಪರೀಕ್ಷಾ ಪ್ರಯೋಗಾಲಯ, ಐಸಿಯು ವಾರ್ಡ್, ಶಸ್ತ್ರಚಿಕಿತ್ಸಾ ಕೊಠಡಿ ಸೇರಿದಂತ ಅಗತ್ಯ ವಾರ್ಡ್ಗಳು ಮತ್ತು ಉಪಕರಣಗಳು ಇರಲಿವೆ ಎಂದರು.

ಗಣಿ ಕಂಪನಿಯ ಕಾರ್ಮಿಕರ ಮಕ್ಕಳಿಗೆ ಅನುಕೂಲವಾಗಲು ಪ್ರಾಥಮಿಕ ಶಾಲಾ ಬ್ಲಾಕ್ ಹಾಗೂ ಮಾಧ್ಯಮಿಕ ಶಾಲಾ ಬ್ಲಾಕ್ ಗಳನ್ನು ನಿರ್ಮಿಸಲಾಗುತ್ತದೆ. ಜೊತೆಗೆ 51110 ಚದರ ಅಡಿ ಏರಿಯಾದಲ್ಲಿ ಕ್ರೀಡಾ ಸಂಕೀರ್ಣ ನಿರ್ಮಾಣವಾಗಲಿದೆ. ಈ ಕ್ರೀಡಾ ಸಂಕೀರ್ಣವು ಕ್ರೀಡಾ ಸಭಾಂಗಣ, ಬಹುಪಯೋಗಿ ಕ್ರೀಡಾ ಸಭಾಂಗಣ, ಫಿಟ್‌ನೆಸ್ ಕೇಂದ್ರ, ಪ್ರಥಮ ಚಿಕಿತ್ಸಾ ಕೊಠಡಿ, ಲಾಕರ್ ಕೊಠಡಿಗಳು, ರನ್ನಿಂಗ್ ಟ್ರ್ಯಾಕ್, ಬ್ಯಾಸ್ಕೆಟ್ ಬಾಲ್, ವಾಲಿ ಬಾಲ್ ಕೋಟ್, ಟೆನಿಸ್ ಕೋಟ್, ಖೋ-ಖೋ ಕೋಟ್, ಈಜುಕೊಳ, ವೀಕ್ಷಕರ ಗ್ಯಾಲರಿ ಸೌಕರ್ಯ ಒಳಗೊಂಡಿದೆ ಎಂದು ಶಾಸಕರು ತಿಳಿಸಿದರು.

ಈ ಹೊಸ ಸಮುಚ್ಚಯದಲ್ಲಿ ಬೇರೆ ಬೇರೆ ಮೂಲಸೌಕರ್ಯ ಕಲ್ಪಿಸಲಾಗುತ್ತದೆ. ಕಾಂಕ್ರಿಟ್ ರಸ್ತೆ, ಚರಂಡಿ, ಭದ್ರತಾ ಬ್ಲಾಕ್, ಪಾತ್ ವೇ, ಪಾರ್ಕಿಂಗ್ **(2ನೇಪುಟಕ್ಕೆ)**

## ಪಾಲಿಟೆಕ್ನಿಕ್ ಕಾಲೇಜು ಗ್ರಂಥಾಲಯ ಕಟ್ಟದ ಉದ್ಘಾಟನೆ

# ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ : ಶಾಸಕ ವಜ್ಜಲ್

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.29**– ವಿದ್ಯಾರ್ಥಿಗಳು ಒಳ್ಳೆಯ ಶಿಕ್ಷಣ ಪಡೆದು ವಿದ್ಯಾವಂತರಾಗಿ ತಂದೆ-ತಾಯಿಗಳಿಗೆ ಒಳ್ಳೆಯ ಮಕ್ಕಳಾಗಿ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದ ಸರಕಾರಿ ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ 2022-23ನೇ ಸಾಲಿನ ಕೆಕೆಆರ್‌ಡಿಬಿ, ಮ್ಯಾಕ್ರೋ (ಮೇಘಾ) ಯೋಜನೆಯಡಿ ಒಂದು ಕೋ ಟಿ ರೂಪಾಯಿ ಅನುದಾನದಲ್ಲಿ ನಿರ್ಮಿಸಲಾಗಿರುವ ಗ್ರಂಥಾಲಯ ಹಾಗೂ ಸೆಮಿನಾರ್ ಕಾಲ್ ಕಟ್ಟಡಗಳನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು, ಜೀವನದಲ್ಲಿ ದೊಡ್ಡ ಸಾಧನೆ ಮಾಡುವ ಗುರಿ ಇಟ್ಟುಕೊಂಡ ಪ್ರತಿಯೊಬ್ಬ ವಿದ್ಯಾರ್ಥಿಗೂ ಗುರುವಿನ ಆಶೀರ್ವಾದಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಗುರುಗಳ ಒಲು ಮೆಗೆ



ಪಾತ್ರರಾಗಿ ಶಿಕ್ಷಣ ಪಡೆದು ಗುರಿ ಸಾಧಿಸಿ ಎಂದರು.

ಕೆಕೆಆರ್‌ಡಿಬಿಯಿಂದ ಶೈಕ್ಷಣಿಕ ಅಭಿವೃದ್ಧಿಗೆ ವಾರ್ಷಿಕ 20 ಕೋಟಿ ರೂಪಾಯಿ ಅನುದಾನ ನೀಡಲಾಗುತ್ತದೆ. ಬಂದ ಅನುದಾನ ಸದ್ಬಳಕೆ ಮಾಡಿಕೊಳ್ಳುವ ಮೂಲಕ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ಕಾರ್ಯ ಶಿಕ್ಷಕರದ್ದಾದರೆ, ದಕ್ಷಿಣ ರಾಜ್ಯದ ಜಿಲ್ಲೆಗಳಲ್ಲಿನ ಶೈಕ್ಷಣಿಕ ಮಟ್ಟಕ್ಕೆ ವ್ಯಾಸಾಂಗ ಮಾಡಿ ಉತ್ತಮ ಫಲಿತಾಂಶ ಹೊರತರುವುದು ವಿದ್ಯಾರ್ಥಿಗಳ ಕೆಲಸ. ಮುಂದಿನ ದಿನಗಳಲ್ಲಿ ಕಾಲೇಜಿಗೆ ಅಗತ್ಯ ವಿರುವ ಸವಲತ್ತುಗಳನ್ನು ಮಾಡಿಕೊಡಲಾಗುವುದು. ವಿದ್ಯಾರ್ಥಿಗಳು ಶಿಕ್ಷಕರು ನಿಶ್ಚಿಂತೆಯಿಂದ ವಿದ್ಯಾಭ್ಯಾಸದ ಕಡೆಗೆ ಗಮನ ಹರಿಸಿ ಎಂದು ಹೇಳಿದರು.**(2ನೇಪುಟಕ್ಕೆ)**

# ನಮ್ಮ ಹಿರಿಯರ ಜನಪದ ಹಬ್ಬಗಳಲ್ಲಿ ನಾಗರ ಪಂಚಮಿ ಸೇರಿದೆ : ಬಿ.ವಿ.ರೆಡ್ಡಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.29**–ಪಟ್ಟಣದ ಬಿ.ವಿ.ಆರ್. ಇ-ಟೆಕ್ನೋ ಶಾಲೆಯಲ್ಲಿ ನಾಗರಪಂಚಮಿ ಹಬ್ಬ ಆಚರಣೆಗೆ ಚಾಲನೆ ನೀಡಿ ಬಿ.ವಿ.ಆರ್.ಸಂಸ್ಥೆಯಅಧ್ಯಕ್ಷರಾದ ಬಿ.ವಿ.ರೆಡ್ಡಿ ಮಾತನಾಡಿ ನಮ್ಮ ಪ್ರಕೃತಿಯಲ್ಲಿನ ಪ್ರತಿಯೊಂದು ಜೀವಿಗೂ ಕೂಡ ಮಹತ್ವವಾದ ಸ್ಥಾನವಿದೆ ಯಾವೊಂದು ಜೀವಿಯು ಕೂಡ ನಾಶವಾದಲ್ಲಿ ಪ್ರಕೃತಿಯಲ್ಲಿ ಅಸಮತೋಲನ ಉಂಟಾಗುತ್ತದೆ ಅದ್ದರಿಂದ ನಾಗಗಳಬಗ್ಗೆ ಅನೇಕ ಪೌರಾಣಿಕ ಹಿನ್ನೆಯ ಕಥೆಗಳು ಕೂಡ ಇವೇ .ಶ್ರಾವಣ ಮಾಸದಲ್ಲಿ ಬರುವ ಮೋದಲ ಹಬ್ಬ ನಾಗಪಂಚಮಿಯಾಗಿದೆ ಎಂದು ನಾಗರ ಪಂಚಮಿ ಹಬ್ಬದ ಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದರು.

ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸಂಭ್ರಮದಿಂದ ಆಚರಿಸಿದರು. ಶಾಲೆಯ ಮಕ್ಕಳು ಶಿವ



ಮತ್ತು ಪಾರ್ವತಿಯ ವೇಷವನ್ನು ಹಾಕಿ ಕೊಂಡು ನಾಗ ಪಂಚಮಿ ಹಬ್ಬದ ಕುರಿತು ರೂಪಕದ ಮೂಲಕ ಮಕ್ಕಳಿಗೆ ತಿಳಿಸಿಕೊಡಲಾಯಿತು. ನಾಗರ ಹುತ್ತದ ಪ್ರತಿ ರೂಪಕ್ಕೆ ಮಕ್ಕಳು ಹಾಲನ್ನು ಹಾಕಿ ಸಂಭ್ರಮಿಸಿದರು.

ಶಾಲೆಯ ಶಿಕ್ಷಕರಾದ ಶಿಕ್ಷಕ ವಾಜೇಂದ್ರ ದಿಗ್ಗಾವಿ ನಾಗಪಂಚಮಿ ಹಬ್ಬದ ಕುರಿತು ಮಾತನಾಡಿದರು. ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಪದ್ಮಾವತಿ, ಮುಖ್ಯಗುರು ಸರ್ ಮತ್ ಖಾನ್ , ಶಿಕ್ಷಕರಾದ ಉಡುಪಿ ಕೃಷ್ಣ , ಆರ್.ಎಸ್.ಲಲೀತಾ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

ನಾಗರಪಂಚಮಿ ಹಬ್ಬದ ಕುರಿತು ಶಾಲೆಯ ಮಕ್ಕಳಿಂದ ನೃತ್ಯ ರೂಪಕ ಹಾಗೂ ನಾಟಕ ಪ್ರದರ್ಶನ ನಡೆಯಿತು.

# ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ತರಗತಿಯ ಕೊಠಡಿಯಲ್ಲಿ ಅಡಗಿದೆ : ಸುಭಾಶ್ ಪಾಟೀಲ್



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಜು.29**–ಅಂತಿಮ ವರ್ಷದ ವಿದ್ಯಾರ್ಥಿಗಳು ಮುಂದಿನ ಉಜ್ವಲ ಭವಿಷ್ಯವನ್ನು ರೂಪಿಸಿ ಕೊಳ್ಳಬೇಕು ಗುರು-ಶಿಷ್ಯರ ಸಂಬಂಧ ನಿರಂತರವಾಗಿ ಕೂಡಿರಲು ಪ್ರತಿನಿತ್ಯ ತರಗತಿಗಳು ನಡಿಯಬೇಕೆಂದು ಎಂದು ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಸುಭಾಸ್ ಪಾಟೀಲ್ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ದೇವದುರ್ಗ ದಲ್ಲಿ ಹಮ್ಮಿಕೊಂಡ 2024-25 ನೇ ಸಾಲಿನ ಎಂ ಎ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಎಂಎ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಸಮಾರಂಭದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳಿಗೆ ಕಲಿಕೆಯಲ್ಲಿ ಆಸಕ್ತಿ, ಕಲಿಕೆಯಲ್ಲಿ ಉತ್ಸಾಹದಿಂದ ಕುಡಿದಾಗ ಮಾತ್ರ ಯಶಸ್ಸು ಸಾದ್ಯ ಎಂದರು.

ನಂತರ ಕಾರ್ಯಕ್ರಮದ ಕುರಿತು ಡಾ. ಅನಂತ ಬಿ.ಜಿ. ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆ ಜೊತೆಗೆ ನೆಟ್ , ಕೆ ಸೆಟ್ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಬೇಕು ನಮ್ಮ ಕಾಲೇಜ್ ಇಂದ 08 ಜನ ವಿದ್ಯಾರ್ಥಿಗಳು ತೇರ್ಗಡೆ ಗೊಳಿಸಿದ್ದಾರೆ ನೀವು ಸಹಿತ ಯಶಸ್ವಿಯಾಗಬೇಕೆಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಕಾರ್ಯಕ್ರಮದ ಮುಖ್ಯ ಅತಿಥಿ ಹನುಮಂತ ಜಗ್ಗಿ ಮಾತನಾಡಿ ಇತಿಹಾಸ ವನ್ನು ಓದುವ ಮಕ್ಕಳಾಗದೆ ಇತಿಹಾಸವನ್ನು ಸೃಷ್ಟಿಸುವ, ಮಕ್ಕಳಾಗಿ ಎಂದು ರಾಜ್ಯಶಾಸ್ತ್ರ ಪ್ರಧ್ಯಾಪಕ ಹನುಮಂತ ಜಗ್ಗಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ನೆಟ್ ಮತ್ತು ಕೆಸೆಟ್ ಪಾಸು ಮಾಡಿದ ವಿದ್ಯಾರ್ಥಿಗಳಾದ ಯಂಕನಗೌಡ ಕಾಚಪುರ, ನಾಗರಾಜ, ಸಿದ್ದಪ್ಪ, ರಮೇಶ್, ಹನುಮಂತ ಇವರಿಗೆ ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಶಶಿಧರ್ ಅಕ್ಕರಕಿ, ಚಂದ್ರಶೇಖರ ಅಕ್ಕರಕಿ, ಮುನಿಯಪ್ಪ ನಾಗೋಲಿ, ಎಚ್ ಡಿ ಶಿವರಾಜ, ಸೇರಿದಂತೆ ಇತರರು ಇದ್ದರು

## ಮೊದಲನೇಯ ಪುಟದಿಂದ

# ಮುಖ್ಯಮಂತ್ರಿಗಳ ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಯಲಿ: ಜೆ.ಟಿ.ಪಾಟೀಲ್

ಸೇರುವ ಜನತೆಗೆ ಅನುಕೂಲವಾಗುವಂತೆ ಕುಡಿಯುವ ನೀರು ಮತ್ತು ಸರಿಯಾದ ಸಾರಿಗೆ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಮಾತನಾಡಿ, ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮವು ಯಾವುದೇ ರೀತಿಯಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ನಡೆಯಲು ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧಿಕಾರಿಗಳು ಎಲ್ಲಾ ರೀತಿಯ ಅಗತ್ಯ ಕ್ರಮವಹಿಸಬೇಕು. ಇದಕ್ಕೆ ಸಹಾಯಬೇಕಿದ್ದರೆ ಸಮಿತಿಗಳಿಗೆ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಮತ್ತು ಸಿಬ್ಬಂದಿಯನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಸ್ವಾಗತ, ಆಸನದಲ್ಲಿ ಶಿಷ್ಟಾಚಾರ ಪಾಲನೆ, ಸನ್ಮಾನ, ಸ್ಮರಣಿಕೆ ವಿತರಣೆ ಸೇರಿದಂತೆ ಇನ್ನೀತರ ಎಲ್ಲಾ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯಬೇಕು. ಗಣ್ಯರಿಗೆ ಮತ್ತು ಸಾರ್ವಜನಿಕರಿಗೆ ಊಟ, ಉಪಹಾರ ಮತ್ತು ಕುಡಿಯುವ ನೀರು ಪೂರೈಕೆಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಸ್ಥಳ ಪರಿಶೀಲನೆ: ಸಭೆ ಬಳಿಕ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್ ಕಂಪನಿಯ ಆವರಣದಲ್ಲಿ ಸಂಚರಿಸಿ ಮುಖ್ಯ ವೇದಿಕೆಯ ಸ್ಥಳದ ವೀಕ್ಷಣೆ ಮಾಡಿದರು. ಬಳಿಕ ಮಾನ್ಯ ಮುಖ್ಯಮಂತ್ರಿಗಳು ಆಗಮಿಸಲಿರುವ ಹೆಲಿಪ್ಯಾಡ್ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಿಸಿ ಸೂಕ್ತ ಭದ್ರತೆಯೊಂದಿಗೆ ಹೆಲಿಪ್ಯಾಡ್ ನಿರ್ಮಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ವಿಧಾನ ಪರಿಷತ್ ಶಾಸಕರಾದ ಶರಣಗೌಡ ಬಯ್ಯಾಪುರ, ಮುಖಂಡರಾದ ಡಿ.ಎಸ್.ಹೂಲಗೇರಿ, ಕಂಪನಿಯ ಎಂ.ಡಿ. ಆರ್.ಶಿಲ್ಪಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ, ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ನೀಡಿ : ಶಾಸಕ ವಜ್ಜಲ್

ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಮಾತನಾಡಿ, ಅಂದಿನ ಶಾಸಕರಾದ ಅಮರೇಗೌಡ ಪಾಟೀಲ ಬಯ್ಯಾಪುರ ಅವರು ಮುತುವರ್ಜಿ ವಹಿಸಿ ಈ ಕ್ಷೇತ್ರಕ್ಕೆ ಜೆಟಿಟಿಸಿ ಎಂತಹ ಶಿಕ್ಷಣ ಕೇಂದ್ರಗಳನ್ನು ನೀಡಿದ ಶ್ರೇಯಸ್ಸು ಅವರಿಗೆ ಸಲ್ಲಬೇಕು, ಶಿಕ್ಷಣಕ್ಕೆ ನೀಡುವ ಈ ಉದ್ದೇಶ ಪಾಲಕರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಬೇರೆ ಬೇರೆ ಜಿಲ್ಲೆಗಳಲ್ಲಿ ಸಹ ಸಾಗುತ್ತಿದ್ದು, ಅದನ್ನೂ ತಪ್ಪಿಸಲು ಈ ಕಾಲೇಜಿಗೆ ವಿದ್ಯಾರ್ಥಿಗಳು ಇನ್ನು ಹೆಚ್ಚಿನ ಮಕ್ಕಳ ನೋಂದಣಿ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ನಗರ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಪಾಟೀಲ್ ಕರಡಕಲ್, ಗ್ಯಾರಂಟಿ ಯೋಜನಾ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಬಿಜೆಪಿ ತಾಲ್ಲೂಕು ಅಧ್ಯಕ್ಷ ನಾಗಭೂಷಣ, ಶಶಿಧರ ಪಾಟೀಲ್ ಆಶಿಹಾಳ, ಬಸನಗೌಡ ಮೇಟಿ, ಗಿರಿಮಲ್ಲನಗೌಡ ಕರಡಕಲ್, ವೆಂಕನಗೌಡ ಐದನಾಳ, ಮುದುಕಪ್ಪ ನಾಯಕ, ಪಾಲಿಟೆಕ್ನಿಕ್ ಕಾಲೇಜು ಪ್ರಾಚಾರ್ಯ ಮಲ್ಲಪ್ಪ ಸರ್ಜಾಪುರ, ಜಿಪಂಎಇಇ ಹನುಮಂತಪ್ಪ ಆದಿಮನಿ, ಕಾಲೇಜಿನ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಹಟ್ಟಿ ಚಿನ್ನದ ಗಣಿ ಪ್ರದೇಶದಲ್ಲಿ 998 ಕೋಟಿ ರೂ. ವೆಚ್ಚದ ಅಭಿವೃದ್ದಿ ಕಾಮಗಾರಿಗೆ ಮುಖ್ಯಮಂತ್ರಿಗಳಿಂದ ಆ.6ರಂದು ಶಂಕುಸ್ಥಾಪನೆ

ಸ್ಥಳಗಳು, ಕಾಂಪೌಂಡ್ ಗೋಡೆ, ಮಳೆನೀರು ಕೊಯ್ಲು, ಯೋಗ ಪ್ರದೇಶ, ಮಕ್ಕಳ ಆಟದ ಪ್ರದೇಶ, ತಡೆಗೋಡೆ, ಪ್ರವೇಶ ಕಮಾನು, ಸಂಪ್ ಟ್ಯಾಂಕ್, ಎಸ್ಟಿಪಿ, ಇಟಿಪಿ ಓವರ್ ಹೆಡ್ ಟ್ಯಾಂಕ್, ಜಿಎಲ್ ಎಸ್ ಆರ್ ಟ್ಯಾಂಕ್, ಬಾಹ್ಯ ವಿದ್ಯುದೀಕರಣ ಮತ್ತು ನೀರು ಸರಬರಾಜು ವ್ಯವಸ್ಥೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಚಿನ್ನದ ಉತ್ಪಾದನೆ ಪ್ರಮಾಣದಲ್ಲಿ ಹೆಚ್ಚಳ: ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಈ ಮೊದಲು ವರ್ಷಕ್ಕೆ 1500 ಕೆ.ಜಿ.ಯಷ್ಟು ಚಿನ್ನ ಉತ್ಪಾದನೆಯ ಗುರಿ ಇತ್ತು. ತಾವು ಅಧಿಕಾರ ಸ್ವೀಕರಿಸಿದ ಮೇಲೆ ವಾರ್ಷಿಕವಾಗಿ 1605 ಕೆ.ಜಿ ಚಿನ್ನವನ್ನು ಉತ್ಪಾದಿಸಲಾಗಿದೆ. ಇದೀಗ 2025–26ನೇ ಸಾಲಿನಲ್ಲಿ ವಾರ್ಷಿಕವಾಗಿ 1700 ಕೆ.ಜಿ. ಚಿನ್ನವನ್ನು ಉತ್ಪಾದಿಸಲಾಗುವುದು ಎಂದು ಅಧ್ಯಕ್ಷರಾದ ಜೆ.ಟಿ.ಪಾಟೀಲ ಅವರು ಪತ್ರಿಕಾಗೋಷ್ಠಿಯಲ್ಲಿ ವಿಶ್ವಾಸ ವ್ಯಕ್ತಪಡಿಸಿದರು.

ಉತ್ತಮ ಬೆಳವಣಿಗೆ: ಕಂಪನಿಯ ಸಿಬ್ಬಂದಿ ಮತ್ತು ಕಾರ್ಮಿಕರ ಸಂಘದಿಂದ ಚುನಾಯಿತರಾದ ಪ್ರತಿನಿಧಿಗಳು ಪ್ರತಿದಿನ ಗೈರಾಗದೆ ಕೆಲಸ ನಿರ್ವಹಿಸಲು ಒಪ್ಪಿದ ರೀತಿಯು ಕಂಪನಿಯ ಬೆಳವಣಿಗೆಗೆ ಅನುಕೂಲವಾಗಲಿದೆ. ಸಾಮಾಜಿಕ ಕಾಳಜಿ ಹೊಂದಿ ಚುನಾಯಿತ ಪ್ರತಿನಿಧಿಗಳು ತೆಗೆದುಕೊಂಡ ಈ ನಿರ್ಣಯವು ಕಂಪನಿಯ ಇತರೆ ಕಾರ್ಮಿಕರಿಗೆ ಕೆಲಸ ಮಾಡಲು ಪ್ರೇರಣೆಯಾಗಲಿದೆ ಎಂದು ಅಧ್ಯಕ್ಷರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕಿ ಆರ್ ಶಿಲ್ಪಾ, ಮುಖಂಡರಾದ ವೇಣುಗೋಪಾಲಗೌಡ ಪಾಟೀಲ ಜಾಲಹಳ್ಳಿ ಇದ್ದರು.

# ರೂ.5000 ಕೋಟಿ ಪ್ರಸ್ತಾವನೆಗೆ ರಾಜ್ಯಪಾಲರ ಅನುಮೋದನೆ: ಡಾ.ಅಜಯ್ ಧರಂಸಿಂಗ್

ಎಂದು ಸಂತಸ ವ್ಯಕ್ತಪಡಿಸಿದರು.ಇದೇ ವೇಳೆ, ಮಂಡಳಿಯ ಲೆಕ್ಕಪತ್ರದ ಕುರಿತು ಮಾಹಿತಿ ಒದಗಿಸಿದ ಡಾ.ಸಿಂಗ್, 31 ಮಾರ್ಚ್ ತಿಂಗಳಿಗೆ ಕೊನೆಗೊಂಡಂತೆ 2023–24ರಲ್ಲಿ ರೂ. 2009 ಕೋಟಿ, 2024–25ರಲ್ಲಿ ರೂ. 2900 ಕೋಟಿ ರು ಖರ್ಚು ಮಾಡಲಾಗಿದೆ. ಒಟ್ಟಾರೆ ಕಳೆದ 24 ತಿಂಗಳಲ್ಲಿ ಒಟ್ಟು ರೂ. 5167 ಕೋಟಿ ಅನುದಾನವನ್ನು ಖರ್ಚು ಮಾಡಲಾಗಿದೆ ಎಂದು ಅವರು ವಿವರಿಸಿದರು.

ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಮಾರ್ಚ್ 31ರೊಳಗೆ ರೂ. 4000ದಿಂದ 4500 ಕೋಟಿ ಖರ್ಚು ಮಾಡಲು ಚಿಂತನೆ ನಡೆದಿದೆ. ಈ ಪೈಕಿ ಮೈಕ್ರೊ ಯೋಜನೆಗಳಿಗೆ ರೂ. 2075 ಕೋಟಿ ಮೀಸಲಿಡಲಾಗುತ್ತಿದೆ. ಮತ್ತೊಂದೆಡೆ, ಮ್ಯಾಕ್ರೊ ಯೋಜನೆಗಳಿಗೆ ರೂ. 875 ಕೋಟಿ ಮಾನವ ಅಭಿವೃದ್ಧಿ ಸೂಚ್ಯಂಕದ ಗುರಿ ಸಾಧಿಸುವ ನಿಟ್ಟಿನಲ್ಲಿ ಹಣ ಬಳಕೆ ಮಾಡಲಾಗುವುದು ಎಂದು ನುಡಿದರು.

ಇದೇವೇಳೆ, ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳಿಗೆ ಮಂಡಳಿ ವತಿಯಿಂದ ರೂ. 1500 ಕೋಟಿ ಬಳಸಿಕೊಳ್ಳಲಾಗಿದೆ. ಇದರ ಜೊತೆಗೆ, ಈ ಹಿಂದಿನ ಎಲ್ಲ ಯೋಜನೆಗಳನ್ನು ಮುಂದುವರೆಸಲಾಗುವುದು ಎಂದರು.

ರೈತರಿಗೆ ಜಲಭಾಗ್ಯ ಯೋಜನೆ ಜಾರಿಗಾಗಿ ರೂ. 100 ಕೋಟಿ, ಸಣ್ಣ ನೀರಾವರಿ ಇಲಾಖೆ ವತಿಯಿಂದ ಅಗತ್ಯ ಸ್ಥಳಗಳಲ್ಲಿ ಬ್ರಿಜ್ ಕಂ ಬ್ಯಾರೇ???ಗಳನ್ನು ನಿರ್ಮಿಸಲು ರೂ. 100 ಕೋಟಿ ಮೀಸಲಿಡಲಾಗಿದೆ. ಮೇಲಾಗಿ, ರೂ. 400 ಕೋಟಿ ಬಳಸುವ ಮೂಲಕ ಎರಡು ವರ್ಷದಲ್ಲಿ ರೈತರ ಅಭಿವೃದ್ಧಿಗೆ ಬದ್ಧ ಎಂದರಲ್ಲದೆ, ರೂ.1.5 ಕೋಟಿ ವೆಚ್ಚದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಜಿಲ್ಲೆಗಳಲ್ಲೂ ಗೋದಾಮುಗಳ ನಿರ್ಮಾಣ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಈಗಾಗಲೇ ಕಲ್ಯಾಣ ಕರ್ನಾಟಕದಲ್ಲಿ ಹಸಿರೀಕರಣಕ್ಕೆ ಅರಣ್ಯ ಇಲಾಖೆಯೊಂದಿಗೆ ಕಾರ್ಯನಿರ್ವಹಿಸಲು ರೂ. 100 ಕೋಟಿ ಮೀಸಲಿಡಲಾಗಿದೆ. ಗ್ರಾಮೀಣ ಭಾಗದ ಮಹಿಳೆಯರಿಗಾಗಿ ಶೌಚಾಲಯ ನಿರ್ಮಾಣಕ್ಕೂ ಅನುದಾನ ಮೀಸಲಿಡಲಾಗಿದೆ. ಇನ್ನು, ಕಲ್ಯಾಣ ಕರ್ನಾಟದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಪೂರಕವಾಗಿ ಇಂಡಸ್ಟ್ರಿಯಲ್ ಹಬ್ ಸ್ಥಾಪನೆಗೆ ಪ್ರಯತ್ನಗಳು ನಡೆದಿದ್ದು, ಇದಕ್ಕಾಗಿ ಸರ್ಕಾರದ ರೂ.100 ಕೋಟಿಗೆ ಕೆ.ಕೆ.ಆರ್.ಡಿ.ಬಿ ಸಹ ರೂ.100 ಕೋಟಿ ನೀಡಲಿದೆ. ಈ ನಿಟ್ಟಿನಲ್ಲಿ ಈಗಾಗಲೇ ಸಣ್ಣ ಕೈಗಾರಿಕೆಗಳ ಸಚಿವ ಶರಣಬಸಪ್ಪ ದರ್ಶನಾಪುರ ಅವರೊಂದಿಗೆ ಮೂರು ಸುತ್ತಿನ ಮಾತುಕತೆ ನಡೆಸಲಾಗಿದೆ ಎಂದರು.

ಇದೇವೇಳೆ, ಡಯಾಲಿಸಿಸ್‌ಗೆ ಅಗತ್ಯ ಕ್ರಮ ಕೈಗೊಳ್ಳುವ ಪ್ರಯತ್ನಗಳು ನಡೆದಿದ್ದು, ಕೆ.ಕೆ.ಆರ್.ಡಿ.ಬಿಯ ಮಹತ್ವಾಕಾಂಕ್ಷಿ ಯೋಜನೆಗಳ ಪೈಕಿ ಒಂದಾಗಿರುವ ಹಾರ್ಟ್ ಲೈನ್ ಆಂಬ್ಯುಲೆನ್ಸ್ ಸೆಪ್ಟೆಂಬರ್ ತಿಂಗಳಲ್ಲಿ ಲೋಕಾರ್ಪಣೆ ಮಾಡಲಾಗುತ್ತಿದೆ. ಜೊತೆಗೆ, ಅಕ್ಷರ ಆವಿಷ್ಕಾರ ಯೋಜನೆಯಡಿ 200 ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ನಿರ್ಮಾಣಕ್ಕೆ ಚಿಂತನೆ ನಡೆದಿದೆ. ಕಲ್ಯಾಣ ಕರ್ನಾಟಕ ವಿಭಾಗದ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ತಲಾ ಮೂರು ಕೆಪಿಎಸ್ ಶಾಲೆ ನಿರ್ಮಾಣಕ್ಕೆ ತೀರ್ಮಾನ ಮಾಡಲಾಗಿದೆ. ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಒಂದು ಶಾಲೆ ನೀಡಬೇಕು ಎನ್ನುವ ನಿಟ್ಟಿನಲ್ಲಿಯೂ ಚಿಂತನೆ ನಡೆಸಲಾಗುತ್ತಿದೆ ಎಂದರು.

ಕಳೆದ ವರ್ಷ ಆರೋಗ್ಯ ಕ್ಷೇತ್ರಕ್ಕೆ ರೂ. 873 ಕೋಟಿ ನೀಡಲಾಗಿತ್ತು. ಈ ವರ್ಷ ಆರೋಗ್ಯ ಇಲಾಖೆಗೆ ಹೆಚ್ಚುವರಿ 134 ಕೋಟಿ ಮೀಸಲಿಸಲಾಗಿದೆ ಎಚಿದರಲ್ಲದೆ, ಕಲ್ಯಾಣ ಪಥ ಯೋಜನೆ ಅಡಿ 1000 ಕಿ.ಮೀ ರಸ್ತೆ ನಿರ್ಮಾಣಕ್ಕೆ ನಿಗದಿತ ರೂ.1000 ಕೋಟಿಯಲ್ಲಿ ಮಂಡಳಿಯೂ ರೂ. 300 ಕೋಟಿ ನೀಡುತ್ತಿದೆ ಎಂದರು.

ಹಿಂದುಳಿದ ವರ್ಗ, ಅಲ್ಪಸಂಖ್ಯಾತ, ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಶೋಷಿತ ಸಮುದಾಯಗಳಿಗೆ ಮಂಡಳಿಯಿಂದ ಅನುದಾನ ಮೀಸಲಿಡಲಾಗುತ್ತಿದೆ ಎಂದು ಸಹ ಅವರು ಹೇಳಿದರು.

# ಶ್ರಾವಣ ಸೋಮವಾರ: ಪೂಜ್ಯರ ಪಾದಯಾತ್ರೆ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.29–** ಶ್ರಾವಣ ಮಾಸದ ನಿಮಿತ್ತ ಸೋಮವಾರ ತಾಲೂಕಿನ ಯರಡೋಣ ಗ್ರಾಮದ ಮುರುಘಂದ್ರ ಶಿವಯೋಗಿಗಳ ಪಾದಯಾತ್ರೆ ಕಾರ್ಯಕ್ರಮದಲ್ಲಿ ಶಾಸಕ ಮಾನಪ್ಪ ವಜ್ಜಲ್ ಭಾಗವಹಿಸಿದ್ದರು.

ಯರಡೋಣ ಶ್ರೀಮಠದಿಂದ ಗುರುಗುಂಟ ಅಮರೇಶ್ವರ ದೇವಸ್ಥಾನದವರೆಗೂ ನಡೆಯುವ ಪಾದಯಾತ್ರೆ ಕಾರ್ಯಕ್ರಮ ಕಳೆದ 16 ವರ್ಷಗಳಿಂದ ಸಾಗಿ ಬಂದಿದೆ. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ತಾಲೂಕು ಅಧ್ಯಕ್ಷ ಕೆ.ನಾಗಭೂಷಣ, ಮುದಗಲ್ ಅಧ್ಯಕ್ಷ ಹುಲ್ಲೇಶ ಸಾಹುಕಾರ ಸೇರಿ ಹಲವು ಭಕ್ತರು

# ಬಡವರ ಸೇವೆಯಲ್ಲಿ ವೈದ್ಯರು ದೇವರನ್ನು ಕಾಣಬೇಕು : ತಿಪ್ಪಣ್ಣಪ್ಪ ಕಮಕನೂರು

**ಕಲಬುರಗಿ,ಜು.29–**ವೈದ್ಯರುಗಳು ಬಡವರ ಆರೋಗ್ಯ ಸೇವೆಯನ್ನು ಮಾಡಿ ದೇವರನ್ನು ಕಾಣಬೇಕು ರೋಗಿಗಳಿಗೆ ವೈದ್ಯರೆ ನಡೆದಾಡುವ ದೇವರು ಎಂದು ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರು ಹೇಳಿದರು.

ನಗರದ ಜವಳಿ ಕಾಂಪ್ಲೆಕ್ಸ್ ನಲ್ಲಿ ನೂತನವಾಗಿ ಆರಂಭಗೊಂಡ ಹರಿದಾಸ ಹಾರ್ಟ್ ಹಾಸ್ಪಿಟಲ್ ಜುಲೈ 28ರಂದು ಉದ್ಘಾಟನೆ ಮಾಡಿ ಮಾತನಾಡಿದ ಅವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ತಜ್ಞ ವೈದ್ಯರ ಕೊರತೆಯಿಂದ ಸೋಲಾಪುರ ಬೆಂಗಳೂರಿಗೆ ರೋಗಿಗಳು ತೆರಳುತ್ತಿದ್ದ ಯುಗಕ್ಕೆ ಅಂತ್ಯ ಹಾಡಲು ತಜ್ಞ ವೈದ್ಯರು ಕಲಬುರಗಿಯಲ್ಲಿ ಆಸ್ಪತ್ರೆ ಪ್ರಾರಂಭಿಸುವುದರ ಮೂಲಕ ಈ ಭಾಗದ ಜನರ ಸೇವೆಗೆ ಮುಂದಾಗಿರುವುದು ಶ್ಲಾಘನೀಯ ವಿಷಯ ಎಂದು ಹೇಳಿದರು. ಇತ್ತೀಚಿನ ದಿನಗಳಲ್ಲಿ ಹೃದ್ರೋಗವು ಹೆಚ್ಚಾಗುತ್ತಿರುವ ಸಂದರ್ಭದಲ್ಲಿ ಡಾ. ಅರುಣ್ ಕುಮಾರ್ ಹರಿದಾಸ್ ಜಗದ್ವಿಖ್ಯಾತ ವೈದ್ಯರು ಕಲಬುರಗಿಯಲ್ಲಿ ಸೇವೆಗೆ ಸಿಗುತ್ತಿರುವುದು ಈ ಭಾಗದ ದೊಡ್ಡ ಭಾಗ್ಯ. ಇಂ



ತಹ ವೈದ್ಯರುಗಳಿಗೆ ಸರಕಾರ ಹಾಗೂ ಸಾರ್ವಜನಿಕರು ಬೆಂಬಲ ನೀಡಬೇಕು ಎಂದು ಶುಭ ಹಾರೈಸಿದರು.

ಈ ಭಾಗದ ಬಡ ರೋಗಿಗಳ ಸೇವೆಗಾಗಿ ಅತ್ಯಾಧುನಿಕ ಆಸ್ಪತ್ರೆ ತೆರೆಯಲಾಗಿದ್ದು ಕೈಗೆಟಕುವ ದರದಲ್ಲಿ ಸೇವೆ ಒದಗಿಸಲಾಗುವುದು ಎಂದು ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಅರುಣ್ ಕುಮಾರ್ ಹರಿದಾಸ್ ತಮ್ಮ ಪ್ರಾಸ್ತಾವಿಕ ಭಾಷಣದಲ್ಲಿ ತಿಳಿಸಿದರು.ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಉದ್ಯಮಿಗಳಾದ ರಾಘವೇಂದ್ರ ಮೈಲಾಪುರ ಮಾತನಾಡಿ ಕಲಬುರಗಿಯಲ್ಲಿ ಹೃದ್ರೋಗ ಆಸ್ಪತ್ರೆ ಪ್ರಾರಂಭವಾಗಿರುವುದು ಹೆಮ್ಮೆಯ ಸಂಗತಿ ಹಾಗೂ ಡಾ. ಅರುಣ್ ಕುಮಾರ್ ಹರಿದಾಸ್ ಶ್ರೇಷ್ಠ ವೈದ್ಯರಾಗಿದ್ದು ಅವರ ಸೇವೆ ಈ ಭಾಗಕ್ಕೆ ದೊಡ್ಡ ಕೊಡುಗೆ ಎಂದು ಹೇಳಿದರು. ಹರಿದಾಸ್ ಹಾರ್ಟ್ ಆಸ್ಪತ್ರೆ ಸು ಸಜ್ಜಿತವಾಗಿ ಎಲ್ಲ ಸೌಲಭ್ಯಗಳೊಂದಿಗೆ ಪ್ರಾರಂಭವಾಗಿರುವುದರಿಂದ ಹೃದ್ರೋಗ ರಂಗದಲ್ಲಿ ದೊಡ್ಡ ಹೆಜ್ಜೆ ಇದಕ್ಕೆ ಎಲ್ಲ ರೀತಿಯ ನೆರವು ನೀಡಲು ಸಿದ್ದ ಎಂದು ಎಚ್ ಕೆ ಇ ಕೌನ್ಸಿಲ್ ನ ಮಾಜಿ ಸದಸ್ಯ ನಿತಿನ್ ಬಿ. ಜವಳಿ ಶುಭ ಹಾರೈಸಿದರು. ಉದ್ಯಮಿಗಳಾದ ವೆಂಕಟೇಶ ಕಡೇಚೂರ್, ರಾಘವೇಂದ್ರ ಮೈಲಾಪೂರ, ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ್, ಕಲಬುರಗಿ ಮಹಾನಗರ ಪಾಲಿಕೆಯ ಮಾಜಿ ಉಪಮೇಯರ್ ನಾಗವೇಣಿ ತಿಪ್ಪಣ್ಣಪ್ಪ ಕಮಕನೂರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಪ್ರಮೀಳಾ ಎಂ.ಕೆ, ಡಾ. ರಾಜೇಶ್ ಕಡೇಚೂರ್, ಶ್ರೀಮತಿ ಕೋಮಲೇಶ್ವರಿ ಅರುಣ್ ಕುಮಾರ್, ಅಂತರಾಷ್ಟ್ರೀಯ ಖ್ಯಾತಿಯ ಜಾದುಗಾರ ಕುದ್ರೋಳಿ ಗಣೇಶ್ ಇದ್ದರು. ಆಕಾಶವಾಣಿಯ ನಿವೃತ್ತ ಕಾರ್ಯಕ್ರಮಕ್ಕೆ ಸ್ವಾಗತಿಸಿ ನಿರೂಪಣೆ ಮಾಡಿದರು.

# ಸಿಎಂ, ಡಿಸಿಎಂ ರಾಜ್ಯದ ಜನರ ಕ್ಷಮೆ ಕೇಳಲು ತೇಲ್ಕೂರ್ ಆಗ್ರಹ

**ಕಲಬುರಗಿ,ಜು.29–**ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಅವರು ಅತ್ಯಂತ ಸಮರ್ಥವಾಗಿ 4,079 ದಿನಗಳ ಆಡಳಿತ ನಡೆಸಿದ್ದಾರೆ. ಅಂದರೆ, ಜವಾಹರಲಾಲ್ ನೆಹರೂ ಅವರ ನಂತರದಲ್ಲಿ ಅತಿ ಹೆಚ್ಚು ದಿನಗಳ ಕಾಲ ದೇಶವನ್ನು ಮುನ್ನಡೆಸುತ್ತಿರುವ ಎರಡನೇ ಪ್ರಧಾನಿ ಆಗಿ ಹೊರಹೊಮ್ಮಿದ್ದಾರೆ. ಇದು ಹೊಸ ದಾಖಲೆ. ಇದಕ್ಕಾಗಿ ನಾಡಿನ, ದೇಶದ ಜನರ ಪರವಾಗಿ ಅಭಿನಂದನೆಗಳು ಎಂದು ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ನರೇಂದ್ರ ಮೋದಿ ಅವರು ಸತತ 3ನೇ ಬಾರಿಗೆ ಪ್ರಧಾನಿಯಾಗಿ ದೇಶವನ್ನು ಮುನ್ನಡೆಸುತ್ತಿದ್ದಾರೆ. ದೇಶದ ಪ್ರಧಾನಮಂತ್ರಿಯಲ್ಲ; ದೇಶ ಸೇವಕ ಎಂಬ ವಿಚಾರ ಇಟ್ಟುಕೊಂಡು ದೇಶವನ್ನು ಮುನ್ನಡೆಸುತ್ತಿದ್ದಾರೆ. ಮೋದಿ ಅವರು ತುರ್ತು ಪರಿಸ್ಥಿತಿ ಹೇರಿದವರಲ್ಲ. ಯಾವುದೇ ಒಂದು ಅನುಕಂಪದ ಆಧಾರದಲ್ಲಿ ಸತತವಾಗಿ ಈ ದೇಶದ ಆಡಳಿತ ನಡೆಸುತ್ತಿಲ್ಲ ಎಂದು ತಿಳಿಸಿದರು.

ಅವರು ಪ್ರಾಮಾಣಿಕರಾಗಿ, ಪರಿಶ್ರಮದಿಂದ ಅಭಿವೃದ್ಧಿ ಮಾಡುವ ಮೂಲಕ 3ನೇ ಬಾರಿಗೆ ಪ್ರಧಾನಮಂತ್ರಿಗಳಾಗಿ ಸುದೀರ್ಘವಾಗಿ ದೇಶ ಮುನ್ನಡೆಸುತ್ತಿದ್ದಾರೆ. ಮುಂದೆಯೂ ಕೂಡ ಈ ದೇಶವನ್ನು ಸದೃಢವಾಗಿ ಮುನ್ನಡೆಸಲಿದ್ದಾರೆ ಎಂದು ಹೇಳಿದರು.

ಕಾಂಗ್ರೆಸ್ ರಾಜ್ಯದಲ್ಲಿ ಗೆದ್ದದ್ದು ಹೇಗೆ ?

ಲೋಕಸಭಾ ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎನ್ನುವ ಮೂಲಕ ರಾಹುಲ್ ಗಾಂಧಿಯವರು ಚುನಾವಣಾ ಆಯೋಗದ ಮೇಲೆ ಆರೋಪ ಮಾಡಿದ್ದಾರೆ. ಈ ಮಾತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೂಡ ಧ್ವನಿಗೂಡಿಸಿದ್ದಾರೆ.

ಚುನಾವಣಾ ಆಯೋಗ ಒಂದು ಸಾಂವಿಧಾನಿಕ ಸಂಸ್ಥೆ. ರಾಹುಲ್ ಗಾಂಧಿ ಮತ್ತಿತರರು ಇಂಥ ಸಾಂವಿಧಾನಿಕ ಸಂಸ್ಥೆ ಬಗ್ಗೆ ಅನುಮಾನ ವ್ಯಕ್ತಪಡಿಸುವುದು ಆ ಚುನಾವಣಾ ಆಯೋಗದ ಅಪಮಾನ ಮಾತ್ರವಲ್ಲ; ಪ್ರಜಾಪ್ರಭುತ್ವ ವಿರೋಧಿ ನಡೆಯೂ ಹೌದು ಎಂದು ಆಕ್ಷೇಪಿಸಿದರು. ಡಿ.ಕೆ.ಶಿವಕುಮಾರ್ ಅವರು ತಮ್ಮ ಸೋದರ ಡಿ.ಕೆ.ಸುರೇಶ್ ಅವರು ಇದೇ ಅಕ್ರಮದಿಂದ ಸೋತಿ ದ್ದಾಗಿ ಹೇಳಿದ್ದಾರೆ. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಜನರ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

ಚುನಾವಣಾ ಅಕ್ರಮ ನಡೆದಿದ್ದರೆ ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ 136 ಶಾಸಕರ ಬಲದೊಂದಿಗೆ ಯಾಕೆ ಅಧಿಕಾರಕ್ಕೆ ಬರುತ್ತಿತ್ತು ಎಂದು ಕೇಳಿದರು.

ಕೇಂದ್ರ ಸರಕಾರ, ನರೇಂದ್ರ ಮೋದಿಜೀ, ಬಿಜೆಪಿ ಸೇರಿ ಚುನಾವಣಾ ಆಯೋಗದ ದುರ್ಬಳಕೆ ಮಾಡಿದ್ದಿದ್ದರೆ ನೀವು ಮುಖ್ಯಮಂತ್ರಿಯಾಗಲು ಸಾಧ್ಯವಿತ್ತೇ ಸಿದ್ದರಾಮಯ್ಯನವರೇ ಎಂದು ಪ್ರಶ್ನಿಸಿದರು. ಈಚೆಗೆ 3 ಉಪ ಚುನಾವಣೆಯಲ್ಲೂ ಗೆದ್ದರಲ್ಲವೇ? ಆಗ ಚುನಾವಣಾ ಆಯೋಗದಿಂದ ದುರ್ಬಳಕೆ ಆಗಿಲ್ಲವೇ ಎಂದು ಕೇಳಿದರು.

ರಾಹುಲ್ ಗಾಂಧಿ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರ ಹೇಳಿಕೆ ಅಪಾಯಕಾರಿ ಬೆಳವಣಿಗೆ. ಕಾಂಗ್ರೆಸ್ ನಾಯಕರ ತುರ್ತು ಪರಿಸ್ಥಿತಿಯ ಮನಸ್ಥಿತಿ ಇಂದಿಗೂ ಬದಲಾಗಿಲ್ಲ ಎಂಬುದಕ್ಕೆ ಮತ್ತೊಂದು ನಿದರ್ಶನವಿದು,ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರು ನಾಡಿನ ಜನರ ಕ್ಷಮೆ ಯಾಚಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

# ಧರ್ಮಸ್ಥಳ ಪ್ರಕರಣ ಶವ ಉತ್ಖನನ ಕಾರ್ಯ ಆರಂಭ

**ಮಂಗಳೂರು, ಜು. 29–** ರಾಜ್ಯದಾದ್ಯಂತ ಭಾರೀ ಸಂಚಲನ ಸೃಷ್ಟಿಸಿರುವ ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಶವಗಳನ್ನು ಹೂತಿಟ್ಟ ಪ್ರಕರಣದ ಬೆನ್ನತ್ತಿರುವ ವಿಶೇಷ ತನಿಖಾ ತಂಡ ಶವಗಳನ್ನು ಹೂತಿಟ್ಟಿರುವ 13 ಸ್ಥಳಗಳಲ್ಲಿ ಉತ್ಖನನ ಕಾರ್ಯಕ್ಕೆ ಚಾಲನೆ ನೀಡಿದೆ.

ದೂರುದಾರ 13 ಸ್ಥಳಗಳನ್ನು ಗುರುತಿಸಿದ್ದು ಮೊದಲ ಗುರುತು ಸ್ಥಳದಿಂದಲ್ಲೇ ಸಮಾಧಿ ಅಗೆಯುವ ಸ್ಥಳಕ್ಕೆ ಎಸ್‌ಐಟಿ ಮುಂದಾಗಿದ್ದು 12 ಮಂದಿ ಕಾರ್ಮಿಕರನ್ನು ನಿಯೋಜನೆ ಮಾಡಿಕೊಂಡಿದೆ.

ಇದರ ಜೊತೆಗೆ ಧರ್ಮಸ್ಥಳ ಗ್ರಾ.ಪಂಚಾಯಿತಿಯಿಂದ ಉತ್ಖನನಗೆ ಬೇಕಾಗಿದ್ದ ಸಿದ್ಧತೆ ಮಾಡಿಕೊಂಡು ಉತ್ಖನನಕ್ಕೆ ಪ್ರಾರಂಭಿಸಿದೆ. ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಸಮಾಧಿ ಬಳಿ ಬೀಡುಬಿಟ್ಟಿದ್ದಾರೆ.

ಕೇವಲ ಶವ ಹೂತಿದ್ದ ಜಾಗವಷ್ಟೇ ಅಲ್ಲದೆ, ಅಲ್ಲಿನ ಸಮಾಧಿಯ ರೂಪದಲ್ಲಿದ್ದ ಕೆಲವು ಸ್ಥಳಗಳನ್ನೂ ನಿರ್ದಿಷ್ಟವಾಗಿ ಗುರುತಿಸಿದ್ದಾನೆ. ವ್ಯಕ್ತಿ ಸ್ಥಳ ತೋರಿಸಿದ ಆಧಾರದ ಮೇಲೆ ಅರಣ್ಯದ ಒಳಭಾಗದಲ್ಲಿ ಸಮಾಧಿಗಳ ಮೇಲೆ ಮಾರ್ಕಿಂಗ್ ಪ್ರಕ್ರಿಯೆ ಮಾಡಲಾಗಿದೆ.

ದೂರುದಾರನ ಮಾಹಿತಿ ಆಧಾರದಲ್ಲಿ ಸ್ಥಳ ಗುರುತಿಸುವ ಆರಂಭಿಕ ಪ್ರಕ್ರಿಯೆಯನ್ನು ನಿನ್ನೆ ಮಾಡಲಾಗಿದೆ. ಅಲ್ಲಿ ಕಾವಲಿಗೆ ಪೊಲೀಸರನ್ನು ನಿಯೋಜಿಸಲಾಗಿದೆ. ಇಂದು ಅಗೆಯುವ ಪ್ರಕ್ರಿಯೆ ನಡೆಯಲಿದೆ.

ಅರಣ್ಯ ಹಾಗೂ ಕಂದಾಯ ಇಲಾಖೆ, ವಿಧಿವಿಜ್ಞಾನ ತಂಡ,ಅಸ್ಥಿಪಂಜರ ತಜ್ಞ, ಮಾನವಶಾಸ್ತ್ರಜ್ಞ,ಹಾಗೂ ಮೆಡಿಕೋ–ಲೀಗಲ್ ತಜ್ಞರು ಈ ಸಂದರ್ಭದಲ್ಲಿ ಹಾಜರಿದ್ದರು.

ಸ್ಥಳದ ಮಣ್ಣಿನ ರಚನೆ, ಪರಿಸರದ ಸ್ಥಿತಿ, ಮತ್ತು ಸ್ಥಳದ ಭೌಗೋಳಿಕ ಲಕ್ಷಣಗಳನ್ನು ಪರಿಶೀಲನೆಗೆ ಒಳಪಡಿಸಲಾಗಿದೆ. ಡಿಜಿಟಲ್ ದಾಖಲೆಗಾಗಿ ಫೋಟೋಗ್ರಫಿ ಹಾಗೂ



ವಿಡಿಯೋ ದಾಖಲೆ ಪ್ರಕ್ರಿಯೆ ನಡೆಸಲಾಯಿತು.

ಅನಾಮಿಕ ವ್ಯಕ್ತಿಯೊಂದಿಗೆ ಎಸ್‌ಐಟಿ ತನಿಖಾ ಅಧಿಕಾರಿ ದಯಾಮಾ ನೇತೃತ್ವದಲ್ಲಿ ಸುಮಾರು 45 ನಿಮಿಷಗಳ ಕಾಲ ಕಾಡಿನೊಳಗೆ ಇರುವ ಶವ ಹೂತಿರುವ ಸಾಧ್ಯತೆಯಿರುವ ಸ್ಥಳಗಳನ್ನು ಮಾರ್ಕ್ ಮಾಡಲಾಯಿತು. ಅಲ್ಲಿ ಗುರುತಿಸಿದ ಸ್ಥಳಗಳಲ್ಲಿ ಮುಂದಿನ ಹಂತದಲ್ಲಿ ಶೋಧಕಾರ್ಯ ಆರಂಭವಾಗಲಿದೆ. ಅಲ್ಲಿ ವೈಜ್ಞಾನಿಕವಾಗಿ ಶವಗಳನ್ನು ಹೊರತೆಗೆಯುವ ಮತ್ತು ಶವಗಳ ಕುರುಹುಗಳು ಲಭ್ಯ ಇವೆಯೇ ಎಂಬುದನ್ನು ಪತ್ತೆ ಮಾಡುವುದಕ್ಕೆ ಮುಂದಾಗಲಿದ್ದಾರೆ

ತಾತ್ಕಾಲಿಕವಾಗಿ ಗುರುತಿಸಿದ ಪ್ರದೇಶಗಳ ಸುತ್ತ ಎಚ್ಚರಿಕೆಯೊಂದಿಗೆ ಟೇಪ್ ಅಳವಡಿಸಿ ಶೋಧನೆಗೆ ತಯಾರಿ ನಡೆಸಲಾಗುತ್ತಿದೆ. ಇದರ ನಂತರ ಮಣ್ಣಿನ ಆಳ ಪರೀಕ್ಷೆ, ಶವಗಳ ಶೋಧನಾ ಪೂರ್ವ ತಯಾರಿ ಮುಂದಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಈ ವ್ಯಕ್ತಿ ಯಾರು, ಇಷ್ಟು ದಿನಗಳ ನಂತರ ಮುಂದೆ ಬಂದದ್ದೇಕೆ ಎಂಬ ವಿಚಾರವನ್ನೂ ಎಸ್‌ಐಟಿ ತನಿಖೆಗೆ ಎತ್ತಿಕೊಳ್ಳಲಿದೆ ಎನ್ನಲಾಗಿದೆ.

# ಪಹಲ್ಗಾಮ್ ಉಗ್ರರ ಹತ್ಯೆ ದೃಢ



**ನವದೆಹಲಿ,ಜು,29–** ಕಳೆದ ಏಪ್ರಿಲ್ 22 ರಂದು ನಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾದ ಮೂವರು ಭಯೋತ್ಪಾದಕರನ್ನು ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ "ಆಪರೇಷನ್ ಮಹಾದೇವ್" ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳು ಹೊಡೆದುರುಳಿಸಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದಿಲ್ಲಿ ಹೇಳಿದ್ದಾರೆ

ಭದ್ರತಾ ಪಡೆಗಳ ಕಾರ್ಯಾಚರಣೆಯಲ್ಲಿ ಸುಲೇಮಾನ್, ಅಫ್ಘಾನ್ ಮತ್ತು ಗಿಬ್ರಾನ್ ಎಂದು ಗುರುತಿಸಲಾದ ಮೂವರು ಭಯೋತ್ಪಾದಕನ್ನು ಹತ್ಯೆ ಮಾಡಲಾಗಿದೆ. ಸುಲೇಮಾನ್, ಲಷ್ಕರ್–ಇ–ತೊಯ್ಬಾ ಸಂಘಟನೆಯ ಉನ್ನತ ಕಮಾಂಡರ್ ಆಗಿದ್ದರು ಜೊತೆಗೆ ಅಫ್ಘಾನ್ ಮತ್ತು ಗಿಬ್ರಾನ್ ಕೂಡ "ಪ್ರಮುಖ ಭಯೋತ್ಪಾದಕರಾಗಿದ್ದರು ಎಂದಿದ್ದಾರೆ. ಲೋಕಸಭೆಯಲ್ಲಿ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಕುರಿತು ನಿನ್ನೆಯಿಂದ ಆರಂಭವಾಗಿರುವ ಚರ್ಚೆಯ ಎರಡನೇ ದಿನವಾದ ಇಂದು ಮಾತನಾಡಿದ ಅಮಿತ್ ಶಾ ಅವರು ಪ್ರದಾನಿ ನರೇಂದ್ರ ಮೋದಿ ಅವರು ಭಯೋತ್ಪಾದಕರನ್ನು ಕಳುಹಿಸಿದವರಿಗೆ ಆಪರೇಷನ್ ಸಿಂಧೂರ್ ಮೂಲಕ ತಕ್ಕ ಪಾಠ ಕಲಿಸಿದ್ದಾರೆ. ಈಗ ಭದ್ರತಾ ಪಡೆಗಳು 3 ಉಗ್ರರನ್ನು ಹತ್ಯೆ ಮಾಡಿದ್ಧಾರೆ, ಇದು ಅಮಾಯಕರ ಸಾವಿಗೆ ಸಿಕ್ಕ ಗೆಲುವು ಎಂದು ತಿಳಿಸಿದ್ದಾರೆ.ಅಮಾಯಕ ನಾಗರಿಕರನ್ನು ಅವರ ಕುಟುಂಬಗಳ ಮುಂದೆಯೇ ಧರ್ಮ ಕೇಳಿ ಹತ್ಯೆ ಮಾಡಿದ ಘಟನೆ ಖಂಡನಾರ್ಹ. ಪ್ರೀತಿಪಾತ್ರರನ್ನು ತಮ್ಮೆದುರೇ ಕಳೆದುಕೊಂಡು ನೋವಿನಲ್ಲಿದ್ದ ಕುಟುಂಬಗಳಿಗೆ ಭದ್ರತಾ ಪಡೆಗಳು ನ್ಯಾಯ ಒದಗಿಸಿವೆ ಎಂದು ತಿಳಿಸಿದ್ದಾರೆಭಾರತೀಯ ಸೇನೆ, ಸಿಆರ್‌ಪಿಎಫ್ ಮತ್ತು ಜಮ್ಮು ಕಾಶ್ಮೀರದ ಪೊಲೀಸರು ಜಂಟಿಯಾಗಿ ನಡೆಸಿದ ಕಾರ್ಯಾಚರಣೆಯಲ್ಲಿ ಪಹಲ್ಗಾಮ್ ದಾಳಿಕೋರರ ಪೈಕಿ 3 ಮಂದಿಯನ್ನು ಹತ್ಯೆ ಮಾಡಲಾಗಿದ್ದು ಈ ಮೂಲಕ ಭಾರತದ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಎನ್ನುವ ಸಂದೇಶ ರವಾನಿಸಿದ್ದೇವೆ ಎಂದು ಗುಡುಗಿದ್ದಾರೆ.

"ಬೈಸರನ್ ಕಣಿವೆಯಲ್ಲಿ ನಾಗರಿಕರನ್ನು ಕೊಂದವರಲ್ಲಿ ಮೂವರು ಭಯೋತ್ಪಾದಕರಿದ್ದರು. ಆಪರೇಷನ್ ಮಹಾದೇವ್‌ನಲ್ಲಿ ಭಾಗವಹಿಸಿದ ಭದ್ರತಾ ಸಿಬ್ಬಂದಿಯನ್ನು ಅಭಿನಂಧಿಸುವುದಾಗಿ ಹೇಳಿದ್ಧಾರೆ.ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾದವರಿಗೆ ಆಶ್ರಯ ನೀಡಿದ ಮಂದಿಯನ್ನು ಎನ್ ಐಎ ಈಗಾಲೇ ಬಂಧಿಸಿದೆ, ನಿನ್ನೆ ಮೂರು ಭಯೋತ್ಪಾದಕರನ್ನು ಹತ್ಯೆ ಮಾಡಿದೆ, ಉ ಗ್ರರ ಮೃತ ದೇಹ ಶ್ರೀನಗರಕ್ಕೆ ತಂದಾಗಲೇ ಅವರು ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿ ನಡೆಸಿದ ಮೂವರು ವ್ಯಕ್ತಿಗಳು ಎಂದು ಗುರುತಿಸಲಾಯಿತು ಎಂದು ಸ್ಪಷ್ಟಪಡಿಸಿದರು.

ಪಹಲ್ಗಾಮ್ ದಾಳಿಯ ನಂತರ ಸಂತ್ರಸ್ತ ಕುಟುಂಬಗಳನ್ನು ಭೇಟಿಯಾಗಿದ್ದೆ. ಮದುವೆಯಾದ ಕೇವಲ 6 ದಿನಗಳ ನಂತರ ವಿಧವೆಯಾದ ಮಹಿಳೆಯೊಬ್ಬರು ನೋವು ತೋಡಿಕೊಂಡ ದೃಶ್ಯವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದ್ಧಾರೆ. ಭಯೋತ್ಪಾದಕರಿಗೆ ಆಶ್ರಯ ನೀಡಿದವರನ್ನು ಎನ್‌ಐಎ ಈ ಹಿಂದೆ ಬಂಧಿಸಿದೆ. ನಿನ್ನೆ ಹತ್ಯೆಯಾದ ಉಗ್ರರ ಅವರ ಶವಗಳನ್ನು ಶ್ರೀನಗರಕ್ಕೆ ತಂದಾಗ ಪಹ ಲ್ಗಾಮ್ ದಾಳಿಕೋರರು ಎನ್ನುವುದು ದೃಢಪಟ್ಟಿದೆ.

ಚಿದುಗೆ ತಿರುಗೇಟು : ಪಹಲ್ಗಾಮ್ ದಾಳಿಕೋರರು ಪಾಕಿಸ್ತಾನದವೇ ಎನ್ನುವುದಕ್ಕೆ ಏನು ದಾಖಲೆ ಇದೆ ಎಂದು ಮಾಜಿ ಕೇಂದ್ರ ಗೃಹ ಸಚಿವ ಪಿ. ಚಿದಂಬರಂ ಪ್ರಶ್ನಿಸಿದ್ದರು, ಅದಕ್ಕೆ ಭದ್ರತಾ ಪಡೆಗಳು ನಿನ್ನೆ ತಕ್ಕ ಉತ್ತರ ನೀಡಿದ್ದಾರೆ, ನಿಮ್ಮ ಬಳಿ ಎಲ್ಲಿಂದ ಬಂದಿದ್ದಾರೆ ಎನ್ನುವ ದಾಖಲೆ ಇದೆಯೇ ಅಮಿತ್ ಶಾ ತಿರುಗೇಟು ನೀಡಿದ್ದಾರೆ

ಜೊತೆಗೆ ಭಯೋತ್ಪಾದಕರು ಎಲ್ಲಿಂದ ಬಂದರು ಮತ್ತು ಅದಕ್ಕೆ ಹೊಣೆ ಯಾರು ಎಂದು ನಮ್ಮನ್ನು ಕೇಳಿದ್ದಾರೆ. ಅಧಿಕಾರದಲ್ಲಿರುವುದರಿಂದ ಅದಕ್ಕೆ ನಾವೇ ಜವಾಬ್ದಾರರು, ಆದರೆ ಭಾರತದ ತಂಟೆಗೆ ಬಂದ ಯಾರನ್ನು ಸುಮ್ಮನೆ ಬಿಡುವುದಿಲ್ಲ ಎನ್ನುವುದಕ್ಕೆ ಅನೇಕ ಉದಾಹರಣೆಗಳು ನಮ್ಮ ಮುಂದಿವೆ. ಅದರಲ್ಲಿ ಪಹಲ್ಗಾಮ್ ದಾಳಿಕೋರರನ್ನು ಹತ್ಯೆ ಮಾಡಿರುವೇ ಸಾಕ್ಷಿ ಎಂದಿದ್ದಾರೆ.

# ಖರ್ಗೆ ರಾಜ್ಯ ರಾಜಕಾರಣಕ್ಕೆ ಬಂದರೆ ತಪ್ಪೇನಿಲ್ಲ

**ಬೆಂಗಳೂರು,ಜು.29–**ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯರಾಜಕಾರಣಕ್ಕೆ ಬರುವುದರಲ್ಲಿ ತಪ್ಪೇನಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಬೆಂಗಳೂರಿನ ಸದಾಶಿವ ನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಖರ್ಗೆ ಅವರು ನಿರ್ಣಾಯಕ ಸ್ಥಾನದಲ್ಲಿದ್ದಾರೆ. ಯಾರನ್ನು ಮುಖ್ಯಮಂತ್ರಿ ಮಾಡಬೇಕೆಂಬ ನಿರ್ಧಾರ ಕೈಗೊಳ್ಳುವುದು ಖರ್ಗೆ ಅವರು ಇಂತಹ ಸ್ಥಾನದಲ್ಲಿರುವ ಖರ್ಗೆಯವರು ಎಲ್ಲ ಹುದ್ದೆಗಳಿಗೂ ಸಮರ್ಥರು ಎಂದರು.

ಕಾಂಗ್ರೆಸ್ ಪಕ್ಷದಲ್ಲಷ್ಟೇ ಅಲ್ಲ ಇಡೀ ರಾಷ್ಟ್ರ ರಾಜಕಾರಣದಲ್ಲೇ ಖರ್ಗೆಯವರು ಹಿರಿಯ ಮುಖಂಡರು, ಸುದೀರ್ಘವಾದ 50 ವರ್ಷದ ರಾಜಕಾರಣ ಮಾಡಿರುವ ಅನುಭವವಿದೆ. ಅವರು ಮುಖ್ಯಮಂತ್ರಿ ಸ್ಥಾನ ಕೈತಪ್ಪಿದರ ಬಗ್ಗೆ ಹೇಳಿರುವುದನ್ನು ತಪ್ಪಾಗಿ ಭಾವಿಸಿ ಟೀಕೆ ಮಾಡುವುದು ಸರಿಯಲ್ಲ ಎಂದರು.

ಒಂದು ವೇಳೆ ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯ ರಾಜಕಾರಣಕ್ಕೆ ಬರುತ್ತೇವೆ



ಎಂದು ಹೇಳಿದರೆ ಅದರಲ್ಲಿ ತಪ್ಪೇನಿಲ್ಲ, ಇದನ್ನು ತಪ್ಪು ಎಂದು ಯಾರು ಅರ್ಥೈಸ ಬಾರದು ಎಂದರು.

ನಟಿ ರಮ್ಯಾ ಅವರಿಗೆ ಸಾಮಾಜಿಕ ಜಾಲತಾಣದ ಮೂಲಕ ಕೆಲವರು ಕೆಟ್ಟದ್ದಾಗಿ ಟೀಕೆ ಮಾಡಿರುವ ಪ್ರಕರಣವನ್ನು ಬಹಳ ಗಂಭೀರವಾಗಿ ಪರಿಗಣಿಸಲಾಗಿದೆ. ಇಂತ ಘಟನೆಗಳು ಮುಂದೆ ಆಗಬಾರದು ಇವತ್ತು ರಮ್ಯಾ ಅವರಿಗೆ ಆಗಿರಬಹುದು, ನಾಳೆ ಬೇರೆಯವರಿಗೂ ಈ ರೀತಿಯಾಗಬಹು ದು ಈ ಸಂಬಂಧ ಕಠಿಣಕ್ರಮ ಕೈಗೊ ಳ್ಳುವಂತೆ ಪೊಲೀಸ್ ಆಯುಕ್ತರಿಗೆ ಸೂಚನೆ ಕೊಡುತ್ತೇನೆ ಎಂದರು.

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂ ಗಣದ ಬಳಿ ನಡೆದ ಕಾಲ್ತುಳಿತದ ಬಗ್ಗೆ ನ್ಯಾಯಮೂರ್ತಿ ಮೈಕಲ್ ಡಿ. ಕುನ್ಹಾ ಅವರ ವರದಿಯನ್ನು ಸಚಿವ ಸಂಪುಟದಲ್ಲಿ ಚರ್ಚಿಸಿ ಕೆಲ ತೀರ್ಮಾನ ಕೈಗೊಂಡಿದ್ದೇವೆ. ಅದರಂತೆ ಈ ಘಟನೆ ಸಂಬಂಧ ಅಮಾ ನತ್ತಾಗಿದ್ದ ಪೊಲೀಸ್ ಅಧಿಕಾರಿಗಳ ಅಮಾ ನತ್ತನ್ನು ವಾಪಸ್ ಪಡೆದಿದ್ದೇವೆ. ಇದು ಆಡಳಿತಾತ್ಮಕ ನಿರ್ಧಾರ. ಇವರೆಲ್ಲರ ವಿರು ದ್ಧ ಇಲಾಖಾ ತನಿಖೆ ಮುಂದು ವರೆದಿದೆ. ತನಿಖೆಯಲ್ಲಿ ಏನು ಬರುತ್ತೋ ನೋ ಡೋಣ ಎಂದರು.

ಪೊಲೀಸ್ ಆಯುಕ್ತರಾಗಿದ್ದ ಬಿ. ದಯಾ ನಂದ್ ಅವರಿಗೆ ಮತ್ತೆ ಪೊಲೀಸ್ ಆಯು ಕ್ತರ ಹುದ್ದೆ ನೀಡುವುದಿಲ್ಲ. ಅವರ ದರ್ಜೆಗೆ ತಕ್ಕಂತೆ ಹುದ್ದೆ ನೀಡಲಾಗುತ್ತದೆ ಎಂದರು.

# ಮೂತ್ರಕೋಶದ ಸೋಂಕಿಗೆ ಪರಿಹಾರ



ಮೂತ್ರಕೋಶದ ಸೋಂಕು ಅಥವಾ ಉರಿ ಮೂತ್ರ ಬಹಳ ಕಿರಿ ಕಿರಿ ಉಂಟು ಮಾಡುವ ಸಮಸ್ಯೆ. ನಮ್ಮ ಮೂತ್ರಕೋಶದ ಯಾವುದೇ ಭಾಗದಲ್ಲಿ ಆಗುವ ಬ್ಯಾಕ್ಟಿರಿಯಾ ಸೋಂಕಿನಿಂದ ಈ ರೀತಿಯ ಸೋಂಕು ಉಂಟಾಗುತ್ತದೆ. ಉರಿ ಮೂತ್ರವು ಈ ಸೋಂಕಿನ ಒಂದು ರೋಗ ಲಕ್ಷಣ. ಇದಲ್ಲದೆ ಬಹಳ ಚಳಿಯಾಗುವುದು, ಜ್ವರದ ಲಕ್ಷಣಗಳು ಕೂಡ ಸೋಂಕು ಹೆಚ್ಚಾದಾಗ ಕಾಣಿಸಿಕೊಳ್ಳುತ್ತವೆ.

ದೇಹದ ಉಷ್ಣಾಂಶ ಹೆಚ್ಚಾದಾಗ ಮೂತ್ರದ ಬಣ್ಣ ಹೆಚ್ಚು ಹೆಚ್ಚು ಹಳದಿಯಾಗಿರುತ್ತದೆ. ಮೂತ್ರ ವಿಸರ್ಜನೆಯ ಸಮಯದಲ್ಲಿ ನೋವು ಅಥವಾ ಉರಿಯುತ್ತದೆ. ಕೆಲವರಿಗೆ ಇದರಿಂದ ಮೂಗು ಕಟ್ಟಿ ನೆಗಡಿಯಾದಂತೆ ಅನುಭವವಾಗುತ್ತದೆ. ಇನ್ನೂ ಕೆಲವರಿಗೆ ಮೊಡವೆಗಳು ಏಳುವುದು ಕೂಡ ಸಹಜ.


ದೇಹದ ಉಷ್ಣಾಂಶ ಹಲವಾರು ಕಾರಣಗಳಿಂದ ಹೆಚ್ಚಾಗುತ್ತದೆ. ಬೇಸಿಗೆಯ ಸಮಯದಲ್ಲಿ ಇದು ಇನ್ನೂ ಹೆಚ್ಚು. ನಮ್ಮ ದೇಹವು ಪ್ರತಿಯೊಂದು ಸಲ ಮೂತ್ರ ವಿಸರ್ಜನೆಯ ಸಮಯದಲ್ಲಿ ದೇಹದಲ್ಲಿ ಸೇರಿರುವ ಅನಗತ್ಯ ಹಾಗೂ ಅಹಿತ ಕೀಟಾಣುಗಳನ್ನು ಮೂತ್ರದೊಂದಿಗೆ ಹೊರಹಾಕುತ್ತದೆ. ಆದರೆ ಕೆಲವು ಬಾರಿ ಕೀಟಾಣುಗಳು ಹೆಚ್ಚು ಇದ್ದು ಅವು ಮೂತ್ರನಾಳಕ್ಕೆ ಅಂಟಿಕೊಂಡು ಅಲ್ಲೇ ಬೆಳೆದು ಬಿಡುತ್ತವೆ.

ನೀರು ಜೀವ ಜಲ. ನಮ್ಮ ದೇಹಕ್ಕೆ ಅತಿ ಮುಖ್ಯವಾಗಿ ಬೇಕಾದ ಪದಾರ್ಥ ನೀರು. ಅದರಲ್ಲೂ ಬೇಸಿಗೆಯಲ್ಲಿ ಬೆವರಿನ ರೂಪದಲ್ಲಿ ಹಾಗೂ ದೇಹದ ಉಷ್ಣಾಂಶ ಕಾಪಾಡಿಕೊಳ್ಳುವಲ್ಲಿ ನಮ್ಮ ದೇಹವು ಬಹಳಷ್ಟು ನೀರನ್ನು ಕಳೆದುಕೊಳ್ಳುತ್ತದೆ. ಹೀಗಾಗಿ ಅದನ್ನು ಸರಿದೂಗಿಸಲು ನಾವು ಹೆಚ್ಚು ಹೆಚ್ಚು ನೀರು ಕುಡಿಯಬೇಕು. ಬಾಯಾರಿದ ಮೇಲೆ ಅಲ್ಲದೆ, ಬಾಯಾರುವ ಮುನ್ನ ನೀರನ್ನು ಸೇವಿಸುತ್ತಿರಿ. ನಾವು ಕಛೇರಿಯಲ್ಲಿ ಎ ಸಿ ಯಲ್ಲಿ ಕೂತು ಅಥವಾ ಮನೆಯೊಳಗೆ ಇದ್ದು ನಮಗೆ ಬಾಯಾರಿಕೆ ಆಗದೆ ಇದ್ದರೂ ಸಹ, ನೀರು ಕುಡಿಯುವುದನ್ನು ನಾವು ನಮ್ಮ ಅಭ್ಯಾಸ ಮಾಡಿಕೊಳ್ಳುವುದು ಉತ್ತಮ.

ಎಳನೀರು ನಮ್ಮ ಕಲ್ಪವೃಕ್ಷ ನಮಗಾಗಿ ಕೊಡುವ ಕೊಡುಗೆ. ಎಳನೀರು ಉರಿಮೂತ್ರ ಹಾಗೂ ಮೂತ್ರ ಕೋಶದ ಸೋಂಕಿಗೆ ರಾಮಬಾಣದಂತೆ ಕೆಲಸ ಮಾಡುತ್ತದೆ. ನಮಗೆ ಸುಲಭವಾಗಿ ಸಿಗುವ ಎಳನೀರನ್ನು ಬೇಸಿಗೆಯಲ್ಲಿ ದಿನಕ್ಕೊಮ್ಮೆ ಆದರೂ ತಪ್ಪದೆ ಸೇವಿಸಿ. ಎಳನೀರು ನಮ್ಮ ಮೂತ್ರವನ್ನು ಶುದ್ದಿ ಮಾಡುತ್ತದೆ. ಹಾಗೆಯೇ, ಎಳನೀರು ಕುಡಿದಾಗ ನಾವು ಹೆಚ್ಚು ಮೂತ್ರ ವಿಸರ್ಜಿಸುವುದರಿಂದ ಸೋಂಕು ಕೂಡ ಕಡಿಮೆಯಾಗುತ್ತದೆ.

ಬಾರ್ಲಿ ಗಂಜಿಯು ದೇಹದ ಉಷ್ಣಾಂಶವನ್ನು ಮಾಂತ್ರಿಕವಾಗಿ ನಿಯಂತ್ರಿಸುತ್ತದೆ. ಇದು ನಮ್ಮ ದೇಹಕ್ಕೆ ಬಹಳ ತಂಪು. ಬಾರ್ಲಿ ನಮಗೆ ಬೇಕಾದ ನಾರಿನ ಅಂಶವನ್ನು ಕೂಡ ನೀಡುತ್ತದೆ. ಬಾರ್ಲಿಯನ್ನು ನೆನೆಸಿ ನಂತರ ಕುದಿಸಿ ಗಂಜಿ ಮಾಡಿಕೊಂಡು ಕುಡಿಯುವುದರಿಂದ ಮೂತ್ರಕೋಶದ ಸೋಂಕು ಕಡಿಮೆಯಾಗುತ್ತದೆ. ದಿನ ನಿತ್ಯ ಸೇವಿಸುವುದರಿಂದ ಸೋಂಕು ತಗಲುವ ಸಾಧ್ಯತೆಗಳೇ ಕಡಿಮೆ ಆಗುತ್ತವೆ. ದಿನ ನಿತ್ಯ ಒಳ ಉಡುಪುಗಳನ್ನು ಬದಲಿಸಬೇಕು. ಬಳಸಿದ ಒಳ ಉಡುಪುಗಳನ್ನು ಚೆನ್ನಾಗಿ ಒಗೆದು ಆದಷ್ಟು ಬಿಸಿಲಿನಲ್ಲಿ ಒಣಗಿಸಿಡಬೇಕು.

# ಆಯಾಸಕ್ಕೆ ಪರಿಹಾರ



ಈಗಿನ ಕಾಲದಲ್ಲಿ ಯಾರಿಗೆ ನೋಡಿದರು ಸ್ವಲ್ಪ ಕೆಲಸ ಮಾಡುವ ಹಾಗೆ ಇರಲ್ಲ ಆಯಾಸ ಆಗತ್ತೆ ಸುಸ್ತು ಆಗತ್ತೆ. ಹಿಂದಿನ ಕಾಲದವರ ಹಾಗೇ ಅವರು ಮಾಡಿದಷ್ಟು ಕೆಲಸವನ್ನು ನಮಗೆ ಮಾಡೋಕೆ ಆಗಲ್ಲ. ಬಹುಬೇಗ ದೇಹದಲ್ಲಿ ಇರುವ ಶಕ್ತಿಎಲ್ಲವನ್ನು ಕಳೆದುಕೊಂಡು ನಿತ್ರಾಣ ಆಗಿ ಬಿಡ್ತೀವಿ. ಅದಕ್ಕೆ ಆಯಾಸವನ್ನು ಕಳೆದುಕೊಂಡು ಹೊಸಚೈತನ್ಯತುಂಬಿಕೊಳ್ಳಲು ಇಲ್ಲಿದೆ ಸುಲಭವಾದ ಮನೆ ಮದ್ದುಗಳು.

ಕೆಲವರು ಇದ್ದಕ್ಕಿದ್ದ ಹಾಗೆ ನನಗೆ ನಿತ್ರಾಣ, ಆಯಾಸ, ಸುಸ್ತು ಎಂದೆಲ್ಲ ಹೇಳುತ್ತಾ ಇರುತ್ತಾರೆ. ಆಗ ಇಂದು ಲೋಟ ಹಾಲಿಗೆ ಒಂದು ಚಮಚ ಗ್ಲುಕೋಸ್ ಹಾಕಿ ಕೊಡಬೇಕು.ಗ್ಲುಕೋಸ್ ಇಲ್ಲದೆ ಇದ್ದರೆ, ಸಕ್ಕರೆ ಅಥವಾ ಬೆಲ್ಲ ಹಾಕಿ ಪಾನಕ ಮಾಡಿ ಕೊಡಬೇಕು. ಮಧುಮೇಹ ರೋಗಿಗಳಲ್ಲಿ ಈ ರೀತಿ ಆಯಾಸ ಆಗುವುದು ರಕ್ತದಲ್ಲಿ ಸಕ್ಕರೆಯ ಅಂಶ ಕಡಿಮೆ ಆಗುವುದು. ಇದನ್ನ ಮನೆಯಲ್ಲಿ ಇದ್ದವರು ಅರ್ಥಮಾಡಿಕೊಂಡು ಆಯಾಸ ಆಗುವವರಿಗೆ ಈ ಉಪಚಾರ ಮಾಡಿಕೊಡಬೇಕು.

ಹೊಸದಾಗಿ ತಯಾರಿಸಿದ ಕಬ್ಬಿನ ಹಾಲನ್ನು ಒಂದು ಲೋಟ ಕುಡಿಯಲು ಕೊಡಬೇಕು. ಇದರಲ್ಲಿ ಆಮ್ಲಜನಕವನ್ನು ಹೀರುವಗುಣ ಇರುವುದರಿಂದಹೃದಯಾಘಾತದ

ಸಮಯದಲ್ಲಿಯೂ ಹೆಚ್ಚು ಉಪಯೋಗ, ದಾರಿಯಲ್ಲಿ ಆಯಾಸ ಆದಂತೆ ಅನಿಸಿದರೆ ತಕ್ಷಣವೇ ಹಣ್ಣಿನ ಜ್ಯೂಸ್, ಕಬ್ಬಿನ ಹಾಲನ್ನು ಕುಡಿಸಬೇಕು ಹಾಗೂ ಅಲ್ಲೇರಸ್ತೆಯ ಬದಿಯಲ್ಲಿ ವಿಶ್ರಾಂತಿ ತೆಗೆದುಕೊಳ್ಳಲು ಸೂಚಿಸಬೇಕು.

ಕಲ್ಲಂಗಡಿ ಹಣ್ಣಿನ ಜ್ಯೂಸ್ ತೆಗೆದುಕೊಳ್ಳುವುದರಿಂದ ಆಯಾಸ ಪರಿಹಾರ ಆಗತ್ತೆ. ಕರಬೂಜದ ಹಣ್ಣಿನ ರಸವನ್ನು ಸೇವಿಸುವುದರಿಂದರಾಸಾಯನಿಕ ವಸ್ತುಗಳು ತಕ್ಷಣಕ್ಕೆ ರಕ್ತಕ್ಕೆ ಸೇರಿ ಆಯಾಸವನ್ನು ಪರಿಹಾರ ಮಾಡುತ್ತದೆ. ಮಜ್ಜಿಗೆಗೆ ಉಪ್ಪು ಈರುಳ್ಳಿ ಸೇರಿಸಿ ಕುಡಿದರೆ ಮಾರ್ಗ ಆಯಾಸ ಕಡಿಮೆ ಆಗತ್ತೆ. ಗರಿಕೆ ಹುಲ್ಲಿನ ರಸ ಸೇವಿಸುತ್ತಿದ್ದರೆ ಆಯಾಸ, ದಣಿವು ಕಡಿಮೆ ಆಗುತ್ತದೆ. ಮಾವಿನ ಹಣ್ಣಿನ ರಸಕ್ಕೆ ಹಾಲು ಸಕ್ಕರೆ ಸೇರಿಸಿ ಕುಡಿದರೆ ದಣಿವು ಕಡಿಮೆ ಆಗುತ್ತದೆ.

ಹಸಿಯಾದ ಅಲಸಂದೆ ಕಾಳನ್ನು ಬೆಲ್ಲದ ಜೊತೆ ಸೇವಿಸಿದರೆ ಆಯಾಸ ಪರಿಹಾರಆಗುತ್ತದೆ. ಯಾರೇಆದರೂ ಸಹಮನೆಯಲ್ಲಿ ಜೇನು ತುಪ್ಪವನ್ನು ಶೇಖರಿಸಿ ಇಟ್ಟುಕೊಂಡು ಇರುತ್ತಾರೆ.ಒಂದು ಲೋಟ ನೀರಿಗೆ ಒಂದು ಚಮಚ ಜೇನು ತುಪ್ಪವನ್ನು ಸೇರಿಸಿ ಕುಡಿದರೆ, ದಣಿವು ಬಳಲಿಕೆ ನಿವಾರಣೆ ಆಗುತ್ತದೆ.

## ಅಭಿನವ ಶ್ರೀಗಳಿಂದ ಎಸ್.ಆರ್.ಪ್ಯಾಶನ್ ಶಾಪ್ ಉದ್ಘಾಟನೆ



ಯುವ ಮಾರ್ಗ ಸುದ್ದಿ

**ಸಿರವಾರ, ಜು.29–** ಪಟ್ಟಣದ ವಾಲ್ಮೀಕಿ ವೃತ್ತದ ಹತ್ತಿರ ನೂತನವಾಗಿ ಪ್ರಾರಂಭಿಸಿರುವ ಪಟ್ಟಣ ಪಂಚಾಯತಿ ಸದಸ್ಯರಾದ ಅಮರೇಶ ಗಡ್ಲ ಮಾಲಿಕತ್ವದ ಎಸ್.ಆರ್ ಪ್ಯಾಶನ್ ಶಾಪ್ ನ್ನು ನವಲಕಲ್ ಬೃಹನ್ಮಠದ ಅಭಿನವ ಶ್ರೀ ಸೋಮನಾಥ ಶಿವಾಚಾರ್ಯರು ಉದ್ಘಾಸಿದರು.

ಈ ಸಂದರ್ಭದಲ್ಲಿ ವೈ. ಶರಣಯ್ಯ ನಾಯಕ ಗುಡದಿನ್ನಿ, ರಮೇಶ್ ದರ್ಶನಕರ್, ಅಮರೇಶ ಗಡ್ಲ ಸೇರಿದಂತೆ ಪಟ್ಟಣ ಪಂಚಾಯತಿ ಸದಸ್ಯರು, ವಿವಿಧ ಪಕ್ಷದ ಮುಖಂಡರು ಆಗಮಿಸಿ ಶುಭಾಶಯ ತಿಳಿಸಿದರು.

## ಸವಿತಾ ಸಮಾಜದ ವಧು– ವರರ ಸಮಾವೇಶ




**ಹೊಸಪೇಟೆ,ಜು.29–** ಮ್ಯಾರೇಜ್ ಬ್ರೋಕರ್‌ಗಳ ಸುಲಿಗೆ ತಪ್ಪಿಸುವುದು, ಉತ್ತಮ ಸಂಬಂಧಗಳನ್ನು ಬೆಸೆಯುವುದು, ಪೋಷಕರ ಹಣ, ಸಮಯ ಉಳಿತಾಯಕ್ಕೆ ವಧು– ವರರ ಸಮಾವೇಶ ಸಹಕಾರಿಯಾಗಲಿದೆ ಎಂದು ಹೊಸಪೇಟೆ ನಗರಸಭೆ ಅಧ್ಯಕ್ಷ ಎನ್.ರೂಪೇಶ್ ಕುಮಾರ್ ಅಭಿಪ್ರಾಯಪಟ್ಟರು.

ಹೊಸಪೇಟೆ ನಗರ ಸವಿತಾ ಸಮಾಜ, ದಾವಣಗೆರೆ ಸವಿತಾ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಹೊಸಪೇಟೆ ನಗರದ ಶ್ರೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಭಾನುವಾರ ಆಯೋಜಿಸಿದ್ದ ಅಂತಾರಾಜ್ಯ ಮಟ್ಟದ ಸವಿತಾ ಸಮಾಜದ ವದುವರರ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.ಇತ್ತೀಚಿನ ವರ್ಷಗಳಲ್ಲಿ ಸವಿತಾ ಸಮಾಜದ ಯುವಕರು ಸಾಂಪ್ರದಾಯಿಕ ಕುಲವೃತ್ತಿಗೆ ಸೀಮಿತವಾಗಿಲ್ಲ. ಶೈಕ್ಷಣಿಕವಾಗಿ ದಾಪುಗಾಲು ಹಾಕುತ್ತಿದ್ದಾರೆ. ಇಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ನಾನಾ ಕ್ಷೇತ್ರಗಳಲ್ಲಿ ಉದ್ಯೋಗ, ವ್ಯಾಪಾರದಲ್ಲಿ ತೊಡಗಿದ್ದಾರೆ. ಅದರಲ್ಲೂ ಯುವತಿಯರು ಹೆಚ್ಚಿನ ಸಂಖ್ಯೆ ಯಲ್ಲಿ ಸಾಫ್ಟವೇರ್ ಕ್ಷೇತ್ರದಲ್ಲಿರುವುದು ಸಂತಸದ ವಿಷಯ. ಆದರೆ, ಮದುವೆ ವಿಚಾರ ಬಂದಾಗ ಇತ್ತೀಚೆಗೆ ಯುವ ಜನರಲ್ಲಿ ಬೇಕು, ಬೇಡಿಕೆಗಳು ಹೆಚ್ಚುತ್ತಿದ್ದು, ಮದುವೆ ವಿಳಂಬಕ್ಕೆ ಕಾರಣವಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ಮದುವೆ ಪ್ರತಿಯೊಬ್ಬರ ಜೀವನದ ಬಹುಮುಖ್ಯ ಹಂತ. ಸೂಕ್ತ ಸಮಯದಲ್ಲಿ ಒಳ್ಳೆಯ ಸಂಗಾತಿಯನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ದಾವಣಗೆರೆ ಸವಿತಾ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವೆಂಕಟಾಚಲಪತಿ ಪಿ.ಬಿ. ಮಾತನಾಡಿ, ಮದುವೆಗೆ ಉತ್ತಮ ಸಂಗಾತಿ ಹುಡುಕಿಕೊಳ್ಳುವುದು ಅತಿ ಅವಶ್ಯಕ. ಆದರೆ, ಮದುವೆ ಬ್ರೋಕರ್‌ಗಳು ಇದನ್ನೇ ಬಂಡವಾಳ ಮಾಡಿಕೊಂಡು ಸುಲಿಗೆ ಮಾಡುತ್ತಾರೆ. ಜೊತೆಗೆ ಸುಳ್ಳು ಹೇಳಿ ಸಂಬಂಧ ಕುದುರಿಸುತ್ತಾರೆ. ಇದನ್ನು ತಪ್ಪಿಸಲು ವಧು–ವರರ ಸಮಾವೇಶ ಸಹಕಾರಿಯಾಗಿದೆ ಎಂದರು.ಸವಿತಾ ಸ್ವಯಂ ವರ ಉಚಿತ ವೇದಿಕೆಯಿಂದ ಕಳೆದ 9 ವರ್ಷಗಳಲ್ಲಿ ಸುಮಾರು 1 ಸಾವಿರಕ್ಕೂ ಹೆಚ್ಚು ಮದುವೆಗಳು ನಿಶ್ಚಯವಾಗಿವೆ. ಈ ಹಿಂದೆ ದಾವಣಗೆರೆಯಲ್ಲಿ ಆಯೋಜಿಸಿದ್ದ ಸ್ವಯಂ ವರ ಸಮಾವೇಶದಲ್ಲಿ 150, ಬೆಂಗಳೂರಿನ ಸಮಾವೇಶದಲ್ಲಿ 250 ಕ್ಕೂ ಹೆಚ್ಚು ವಧು–ವರರು ಪಾಲ್ಗೊಂಡಿದ್ದು ಹೆಮ್ಮೆಯ ಸಂಗತಿ ಎಂದರು.

ವೇದಿಕೆ ಮೇಲೆ ನಿವೃತ್ತ ಶಿಕ್ಷಕ ನಾಗೇಶ್, ನಿವೃತ್ತ ಅಧಿಕಾರಿಗಳಾದ ಎಎಸ್ಐ ಶ್ರೀನಿವಾಸ, ಸಾರಿಗೆ ಇಲಾಖೆ ನಿವೃತ್ತ ಮನೋಹರ್ ಕುಮಾರ್, ಅಬಕಾರಿ .

ಪೋಷಣೆ ರಾಮಲಿಂಗಪ್ಪ, ನಾರಾಯಣ ಹಡಪದ, ಹೊಸಪೇಟೆ ಟೌನ್ ಸ್ಟೇಷನ್ ಎಎಸ್ಐ ಎಂ.ಸುರೇಶ್, ರಾಯಚೂರು ಸವಿತ ನೌಕರರ ಸಂಘದ ಜಿಲ್ಲಾಧ್ಯಕ್ಷ ಆರ್.ನಾಗರಾಜ್, ಸವಿತಾ ಸಮಾಜದ ರಾಯಚೂರು ಜಿಲ್ಲಾಧ್ಯಕ್ಷ ವಿಜಯ ಭಾಸ್ಕರ್ ಇಟಗಿ, ಹೊಸಪೇಟೆ ಸಮಾಜದ ಪ್ರಮುಖರಾದ ಎನ್.ವೇಣುಗೋಪಾಲ, ಗುರುರಾಜ್ ಹೊಸಪೇಟೆ, ಡಾ.ರಾಘವೇಂದ್ರ ಗುರ್ಜಾಲ, ಕೃಷ್ಣ ಹಡಪದ ಉಪಸ್ಥಿತರಿದ್ದರು

## ಚಿತ್ರ ಸುದ್ದಿ



**ಲಿಂಗಸುಗೂರು : ಪಟ್ಟಣದ ವಿವಿಧ ದೇವಸ್ಥಾನಗಳಲ್ಲಿ ನಾಗರ ಪಂಚಮಿ ನಿಮಿತ್ಯ ಮಹಿಳೆಯರು ನಾಗದೇವರಿಗೆ ಹಾಲೆರೆದು ಪೂಜಿಸಿ ಸಂಭ್ರಮಿಸಿದರು.**

## ಕನ್ನಡ ನೆಲ, ಜಲ ಭಾಷೆ ಉಳುವಿಗಾಗಿ ಪ್ರತಿಯೊಬ್ಬರೂ ಸಂಘಟಿತರಾಗಬೇಕು:ಬಸವರಾಜ ಅತ್ತನೂರು



ಯುವ ಮಾರ್ಗ ಸುದ್ದಿ

**ಸಿರವಾರ, ಜು.29–**ಕನ್ನಡ ನೆಲ, ಜಲ, ಭಾಷೆ ಉಳುವಿಗಾಗಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಪ್ರತಿಯೊಬ್ಬ ಕಾರ್ಯ ಕರ್ತರು ಸಂಘಟಿತರಾಗ ಬೇಕು ಎಂದು ರಾಯಚೂರು ಜಿಲ್ಲಾ ನೂತನ ಅಧ್ಯಕ್ಷರಾದ ಎಂ. ಬಸವರಾಜ ಅತ್ತನೂರು ಅವರು ಕರೆ ನೀಡಿದರು.

ಅವರು ಸೋಮವಾರದಂದು ಪಟ್ಟಣದ ಪ್ರವಾಸಿ ಮಂದಿ ರದಲ್ಲಿ ರಾಮು ಗಿಂಡಿ ಅವರ ಗೆಳೆಯರ ಬಳಗದಿಂದ ಸನ್ಮಾನ ಸ್ವೀಕರಿಸಿ ನಂತರ ಮಾತನಾಡಿದರು, ನಮ್ಮ ಸಂಘಟನೆಯ ರಾಜ್ಯಾಧ್ಯಕ್ಷರಾದ ಕೆ.ಆರ್. ಕುಮಾರ್ ಅವರ ನೇತೃತ್ವದಲ್ಲಿ ಅವರ ತಂಡ ರಾಜ್ಯಾದ್ಯಂತ ಸಂಚರಿಸಿ ಕನ್ನಡ ಸೇನೆ ಸಂಘಟನೆ ಕಟ್ಟಿ ಬೆಳೆಸಲು ನಿರಂತರ ಶ್ರಮಿಸುತ್ತಿದ್ದಾರೆ, ನಮ್ಮ ಜಿಲ್ಲೆಯಲ್ಲಿ ಸಂಘ ಟನೆಯನ್ನು ಪ್ರತಿ ತಾಲೂಕ, ಹೋಬಳಿ ಹಾಗೂ ಗ್ರಾಮಗಳಲ್ಲಿ ಕನ್ನಡ ಸೇನೆ ಸಂಘವನ್ನು ಕಟ್ಟಿ ಸಂಘಟಿತರಾಗಿ ಕೆ..ಆರ್. ಕುಮಾರ್ ಅವರಿಗೆ ಶಕ್ತಿ ತುಂಬಬೇಕು ಎಂದು ಹೇಳಿದರು.

ಇದೆಲ್ಲವೂ ಕೇವಲ ಜಿಲ್ಲಾಧ್ಯಕ್ಷರಿಂದ ಸಾಧ್ಯವಿಲ್ಲ ಪ್ರತಿಯೊಬ್ಬರೂ ಕೈ ಜೋಡಿಸಿದಾಗ ಮಾತ್ರ ಸಂಘದ ಎಲ್ಲಾ ಕಾರ್ಯ ಯೋಜನೆಗಳು ಯಶಸ್ವಿಯಾಗಲು ಸಾಧ್ಯವೆಂದರು.

ಇದೆ ವೇಳೆ ನೂತನ ಜಿಲ್ಲಾಧ್ಯಕ್ಷರಾದ ಎಂ.ಬಸವರಾಜ ಅತ್ತನೂರು, ಕಾರ್ಯಾಧ್ಯಕ್ಷರಾದ ಹನುಮಂತ ನಾಯಕ ಮೇಟಿ, ಸಿರವಾರ ತಾಲೂಕ ನೂತನ ಅಧ್ಯಕ್ಷರಾದ ವೆಂಕಟೇಶ್ ದೊರೆ, ಕಾರ್ಯಾಧ್ಯಕ್ಷರಾದ ಚಂದ್ರು ಹಡಪದ, ಕಾರ್ಯದರ್ಶಿಗಳಾದ ಮೌನೇಶ್ ಪೀತಗಲ್ ಇವರಿಗೆ ರಾಮು ಗಿಂಡಿ ಗೆಳೆಯರ ಬ ಳಗ, ಅತ್ತನೂರು ಗ್ರಾಮದ ಶಕ್ಮೀರ್ ಗೆಳೆಯರ ಬಳಗದಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಪ.ಪಂ. ಮಾಜಿ ಉಪಾಧ್ಯಕ್ಷ ಚನ್ನಪ್ಪ ಗಡ್ಲ, ಶ ಕ್ಮೀರ್ ಅಲಿ ಅತ್ತನೂರು, ಜಯರಾಜ್ ಅಮರಾವತಿ, ಹಿದಾ ಯತ, ಎಂ.ಯಲ್ಲಪ್ಪ, ಮುರಳಿ, ಗುಂಡಪ್ಪ ಚಿಟ್ಟಿ, ಮರಿಯಣ್ಣ, ಪ್ರಭುರಾಜ್, ಹನುಮಂತ ಕರಿಬಿಲ್ಕರ್ ಸೇರಿದಂತೆ ಅನೇಕರು ಇದ್ದರು.

# ಸಮ್ಮೇಳನಗಳು ನಿತ್ಯೋತ್ಸವ ಆಗಬೇಕು: ಸಿ.ಎಸ್.ಆನಂದ

**ಕಲಬುರಗಿ,ಜು.29–**ಸಾಹಿತ್ಯ ಬೇಕು, ಸಮ್ಮೇಳನಗಳು ಬೇಕು. ಈ ಎಲ್ಲ ಶಕ್ತಿ ಕೇಂದ್ರದ ವ್ಯಕ್ತಿಗಳು ಬೇಕು. ಕನ್ನಡದ ಉತ್ಸವಗಳು , ಸಮ್ಮೇಳನಗಳು ನಿತ್ಯೋತ್ಸವ ಆಗಬೇಕು ಎಂದು ಕಥೆಗಾರ ಸಿ.ಎಸ್.ಆನಂದ ಹೇಳಿದರು.

ಕಲಬುರಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ಜಿಲ್ಲಾ 2 ನೆಯ ಯುವ ಸಾಹಿತ್ಯ ಸಮ್ಮೇಳನದಲ್ಲಿ ಸಮಾರೋಪ ನುಡಿ ನುಡಿಯುತ್ತಾ, ಜಾಗತೀಕರಣದ ಈ ದಿನಗಳಲ್ಲಿ ಸಾಹಿತ್ಯ ಮತ್ತು ಸಮ್ಮೇಳನಗಳು ಬೇಕು. ಧರ್ಮ ಮತ್ತು ರಾಜಕೀಯವನ್ನು ನಡೆಸುವ, ಧರ್ಮ ಮತ್ತು ರಾಜಕೀಯದ ಆಲೋಚನೆಯನ್ನು ಬದಲಾಯಿಸುವ , ಧರ್ಮ ಮತ್ತು ರಾಜಕೀಯಕ್ಕೆ ಹೊಸ ಅರ್ಥಗಳನ್ನ ಕಲ್ಪಿಸುವ, ಕೊಡುವ ಶಕ್ತಿ ಸಾಹಿತ್ಯಕ್ಕೆ ಇದೆ. ಈ ಸಮ್ಮೇಳನಗಳು ಪರಸ್ಪರ ಭೇಟಿಯಾಗುವ, ಸ್ನೇಹ ಬೆಳೆಸುವ, ಮಾತು, ಅಭಿಪ್ರಾಯ, ಅನುಭವ ಹಂಚಿಕೊಳ್ಳುವ ಸೇತುವೆ ಆಗುತ್ತವೆ. ಈ ನೆಲದಲ್ಲಿ ಅನೇಕ ಶರಣರು,ಸಂತರು, ಮಹಾಂತರು, ಚಿಂತಕರು ಹಾಗೂ ಸಾಹಿತಿಗಳು ಆಯಾ ಕಾಲಘಟ್ಟದಲ್ಲಿ ಜನಿಸಿ ಬಂದು ತಮ್ಮ ನುಡಿ ಮಲ್ಲಿಗೆಯ ಪರಿಮಳ ಎಲ್ಲಡೆ ಚೆಲ್ಲಿ ಜನರ ಎದೆಯಲ್ಲಿ ಬದುಕಿದ್ದಾರೆ ; ಈ ನೆಲದಲ್ಲಿ ಅಮರತ್ವ ಪಡೆದಿದ್ದಾರೆ.



ಸಾಹಿತ್ಯ ಎಂದರೆ ನೆಲದ ಭಾಷೆ ಸಾಹಿತ್ಯ ಎಂದರೆ ಜಲದ ಭಾಷೆ ಸಾಹಿತ್ಯ ಎಂದರೆ ನಮ್ಮೆಲ್ಲರ ಉಸಿರು ರೊಟ್ಟಿ ನಮ್ಮ ಧರ್ಮ ; ಬೆವರು ನಮ್ಮ ಸಂಸ್ಕೃತಿ ಆಗಬೇಕು ಸೀಮಾತೀತವಾಗಿ ಬದುಕುವುದೇ ಸಾಹಿತ್ಯ ಕಾಲಾತೀತವಾಗಿ ಬದುಕುವುದೇ ಸಾಹಿತ್ಯ ಬರಹಗಾರ ಸಿಮಾತೀತವಾಗಿ ಬೆಳೆಯಬೇಕು ಅವನು ಬರೆದ ಸಾಹಿತ್ಯ ಕಾಲಾತೀತವಾಗಿ ಉಳಿಯಬೇಕು.–ಇಂದು ನಾವು ಪ್ರಚಾರ ಪ್ರಿಯರಾಗದೆ ವಿಚಾರ ಪ್ರಿಯರಾಗಿ ಬದುಕು ಪ್ರೀತಿಸುತ್ತಾ ಬಾಳಬೇಕು. ಬಹುಮುಖ್ಯವಾಗಿ ನಮ್ಮ ಕಣ್ಣೆದುರಿನ ಯುವ ಜನಾಂಗ, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಮೋಬೈಲ್ ಬಿಟ್ಟು ಪುಸ್ತಕ ಹಿಡಿಯಬೇಕು. ಆಮೂಲಕ ಅವರು ಭಾಷಾ ಅಭಿಮಾನ ಮತ್ತು ದೇಶಾ ಅಭಿಮಾನ ಹೊಂದಿ ಉತ್ತಮ ನಾಗರಿಕರಾಗಬೇಕು ಎಂದು ಕಿವಿಮಾತು ಹೇಳಿದರು.

## ಮಕ್ಕಳ ಕಾಣೆ ಪ್ರಕರಣಗಳಲ್ಲಿ ನಿರ್ಲಕ್ಷ್ಯ ಮಾಡದೇ ಪರಿಣಾಮಕಾರಿಯಾಗಿ ತನಿಖೆ ನಡೆಸಿ:ಎಸ್ಪಿ ಪ್ರದೀಪ ಗುಂಟಿ

**ಬೀದರ. ಜು.29–** ಕಾಣೆಯಾದ ಮಕ್ಕಳ ತನಿಖೆಯಲ್ಲಿ ನಿರ್ಲಕ್ಷ್ಯ ಮಾಡಬೇಡಿ ಮತ್ತು ಪರಿಣಾಮಕಾರಿಯಾಗಿ ತನಿಖೆ ನಡೆಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಛೇರಿ ಸಭಾಂಗಣದಲ್ಲಿ ನಡೆದ ಕಾಣೆಯಾದ ಮಕ್ಕಳ ಪತ್ತೆ ಹಚ್ಚಲು ರಚಿಸಿರುವ ವಿಶೇಷ ಕಾರ್ಯಪಡೆ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಕ್ಕಳ ಅಪಹರಣ, ನಾಪತ್ತೆ, ಸ್ವಯಂ ಪ್ರೇರಿತವಾಗಿ ಮತ್ತು ಪ್ರೀತಿಸಿ ಮನೆಯನ್ನು ಬಿಟ್ಟು ಹೋಗಿರುವ 18 ವರ್ಷದೊಳಗಿನ ಮಕ್ಕಳು ಕಾಣೆಯಾಗಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಎಲ್ಲಾ ಪೋಲಿಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಗಳ ಮೌಲ್ಯ ಮಾಪನ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು. 2018 ರಿಂದ 2025ರ ಜುಲೈವರೆಗೆ ಬಾಕಿ ಉಳಿದಿರುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಆದಷ್ಟು ಬೇಗ ಪ್ರಕರಣಗಳು ಮುಗಿಸುವಂತೆ ತಿಳಿಸಿದರು.

ಕಾಣೆಯಾದ ಮಕ್ಕಳ ಪೊ?ಷಕರು, ಸಂಬಂಧಿಕರು ಹಾಗೂ ಸ್ನೇಹಿತರರನ್ನು ಸಂಪರ್ಕಿಸಿ ಮಾಹಿತಿಗಳನ್ನು ಪಡೆದು ಅವರನ್ನು ಟ್ರ್ಯಾಕ್ ಮಾಡಬೇಕು. ಮೊಬೈಲ್‌ನಿಂದ ಕೊನೆಯ ಕರೆಯ ಲೊಕೇಶನ್ ಟ್ರ್ಯಾಕಿಂಗ್ ಮಾಡಿ ದೇಶದ ಯಾವುದೇ ಸ್ಥಳದಲ್ಲಿದರು ಕರೆ ತಂದು ಪೋಷಕರಿಗೆ ಒಪ್ಪಿಸಬೇಕು. ಮಕ್ಕಳ ಕಾಣೆಯಾದ ಪ್ರಕರಣ ದಾಖಲಿಸಿಕೊಂಡ 30 ದಿನಗಳಲ್ಲಿ ಪ್ರಕರಣ ಪೂರ್ಣಗೊಳಿಸಬೇಕು ಮತ್ತು ಪೊ?ಲಿಸ್ ಅಧಿಕಾರಿಗಳು ಒಂದು ವೇಳೆ ತನಿಖೆಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಅವರಿಗೆ ಶೋಕಾಸ್ ನೋಟಿಸ್ ನೀಡಲಾಗುವುದು ಎಂದರು.

ಅಪರ ಜಿಲ್ಲಾಧಿಕಾರಿ ಸುರೇಖಾ ಅವರು ಮಾತನಾಡಿ, ಶಾಲಾ–ಕಾಲೇಜು ಓದುತ್ತಿರುವ ಮಕ್ಕಳ ಕಾಣೆಯಾದ ಅವರ



ಜೊತೆ ಓದುತ್ತಿರುವ ಸ್ನೇಹಿತರನ್ನು ಭೇಟಿ ಮಾಡಿ ಅವರಿಗೆ ತಿಳಿದಿರುವ ಮಾಹಿತಿಗಳನ್ನು ಪಡೆಯಬೇಕು ಮತ್ತು ಪೋಷಕರಿಂದ ಮೂಲ ಮಾಹಿತಿಗಳನ್ನು ಪಡೆದು ಆದಷ್ಟು ಬೇಗ ಮಕ್ಕಳನ್ನು ಪತ್ತೆ ಹಚ್ಚಿ ಪೋಷಕರಿಗೆ ಒಪ್ಪಿಸಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಪ್ರಕಾಶ್ ಅರ್ಜುನ್ ಬನಸೋಡೆ ಮಾತನಾಡಿ, ಮಕ್ಕಳನ್ನು ಅಪಹರಣ ಮಾಡಿ ಭಿಕ್ಷಾಟನೆ, ವೇಶ್ಯವಾಟಿಕೆ ಅಂತಹ ಸಮಾಜದ ಕೆಟ್ಟ ಚಟುವಟಿಕೆಗಳಲ್ಲಿ ಬಳಸಿಕೊಳ್ಳುತ್ತಿದ್ದಾರೆ. ಆದ್ದರಿಂದ ಇಂತಹ ಕೆಟ್ಟ ಚಟುವಟಿಕೆಗಳಿಂದ ಮಕ್ಕಳನ್ನು ರಕ್ಷಿಸಿ ಅವರ ಬಾಲ್ಯವನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಶ್ರೀಧರ್ ಎಚ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ರೂಪಾ ಕೋಟೆಗೌಡರ್, ಶಾಲಾ ಶಿಕ್ಷಣ ಉಪ ನಿರ್ದೇಶಕರಾದ ಸಲಿಂ ಪಾಷಾ, ಜಿಲ್ಲಾ ಮಕ್ಕಳ ಸಮಿತಿ ಅಧ್ಯಕ್ಷ ಶಿವಪ್ಪ, ಬಾಲ ನ್ಯಾಯಾಲಯ ಸದಸ್ಯೆ ಧನ್ವಂತರಿ ಸೇರಿದಂತೆ ಎನ್ ಜಿ ಓ ಗಳ ಅಧಿಕಾರಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು ಸೇರಿದಂತೆ ಕಾಣೆಯಾದ ಮಕ್ಕಳ ಪೋಷಕರು ಉಪಸ್ಥಿತರಿದ್ದರು.

## ಇಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

**ರಾಯಚೂರು,ಜು.29–** ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಆಗಸ್ಟ್ 09 ರಂದು ನುಲಿಯ ಚಂದಯ್ಯ ಜಯಂತಿ ಹಾಗೂ ಆಗಸ್ಟ್ 16 ರಂದು ಶ್ರೀಕೃಷ್ಣ ಜಯಂತಿ ನಡೆಯಲಿವೆ.

ಈ ಜಯಂತಿ ಅಂಗವಾಗಿ ಜುಲೈ 30ರ ಬೆಳಿಗ್ಗೆ 11.30 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಬಹುದಾಗಿದೆ.

ಅಂದು ನಡೆಯುವ ಪೂರ್ವಭಾವಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಸಮಾಜದ ಮುಖಂಡರುಗಳು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೀವನ ಶೈಲಿ ಬದಲಾವಣೆಯಿಂದ ರೋಗ ದೂರ ಮಾಡಿ

**ರಾಯಚೂರು,ಜು.29–**ಜೀವನ ಶೈಲಿಯ ಮತ್ತು ವರ್ತನೆಯ ಬದಲಾವಣೆಯಿಂದ ಅರಿವು ಮೂಡಿಸುವುದರ ಮೂಲಕ ಯಕೃತ್‌ನ ಆರೈಕೆಯನ್ನು ನಾವೆಲ್ಲರೂ ಮಾಡಬೇಕಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ಸುರೇಂದ್ರ ಬಾಬು ಅವರು ಹೇಳಿದರು.

ಜುಲೈ 28ರ ಸೋಮವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ವಿಭಾಗ, ರಾಷ್ಟ್ರೀಯ ಹೆಪಟೈಟಿಸ್ ನಿಯಂತ್ರಣ ಕಾರ್ಯಕ್ರಮದಡಿ ಜರುಗಿದ ವಿಶ್ವ ಹೆಪಟೈಟಿಸ್ ದಿನಾಚರಣೆ ಅಂಗವಾಗಿ ಸಿಬ್ಬಂದಿಯವರಿಗೆ ಹೆಪಟೈಟಿಸ್ ಲಸಿಕೆ ನೀಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹೆಪಟೈಟಿಸ್ ಸೋಂಕಿಗೆ ಅಸ್ಪತ್ರೆಯ ಸಿಬ್ಬಂದಿಯವರು ಒಳಗಾಗುವ ಸಾಧ್ಯತೆಗಳು ಇದ್ದು, ಈ ದಿಶೆಯಲ್ಲಿ ಲಸಿಕೆ ತಪ್ಪದೆ ಪಡೆಯಬೇಕಿದೆ. ಅಲ್ಲದೆ ಸುರಕ್ಷಿತ ರಕ್ತ, ಮತ್ತು ಅದರ ಉತ್ಪನ್ನಗಳ ಬಳಕೆ, ಸುರಕ್ಷಿತ ಚುಚ್ಚುಮದ್ದು ನೀಡುವಿಕೆ, ಸುರಕ್ಷಿತ ನೀರು, ಸ್ವಚ್ಛ ಶೌಚಾಲಯ ಬಳಸುವಿಕೆ, ಸುತ್ತಲಿನ ನೈರ್ಮಲ್ಯ ಕಾಪಾಡಲು ಅಧ್ಯತೆ ನೀಡಲು ಜಾಗೃತಿ ನೀಡಬೇಕು. ಅಲ್ಲದೆ ಮಕ್ಕಳು ಹುಟ್ಟಿನಿಂದ ಒಂದು ವರ್ಷದೊಳಗೆ ತಪ್ಪದೆ ಲಸಿಕೆ ಹಾಕಿಸಬೇಕೆಂದರು.

ಈ ವೇಳೆ ಕಾರ್ಯಕ್ರಮ ಕುರಿತು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳಾದ ಡಾ.ಮಹಮ್ಮದ್ ಶಾಕೀರ್ ಅವರು ಮಾತನಾಡಿ, ಕೆಲಸದ ಸ್ಥಳದಲ್ಲಿ ಕಾರ್ಯನಿರ್ವಹಿಸುವ ವೈದ್ಯರಿಗೆ ಸಿಬ್ಬಂದಿಯವರಿಗೆ ಸೋಂಕು ತಡೆಗೆ ಮೊದಲ ಹಂತದಲ್ಲಿ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ. ಪ್ರಾಥಮಿಕ ಆರೋಗ್ಯ ಕಂದ್ರಗಳಲ್ಲಿಯ ತಜ್ಞವೈದ್ಯರು, ವೈದ್ಯರು, ಶೂಶ್ರುಷಣಾಧಿಕಾರಿ, ಪ್ರಯೋಗಾಲಯ ತಂತ್ರಜ್ಞರು, ಗ್ರುಪ್ ಡಿ ಸಿಬ್ಬಂದಿಯವರಿಗೆ ಎರಡನೆಯ ಹಂತದಲ್ಲಿ ಸಿಹೆಚ್‌ಓ, ಆಶಾ ಕಾರ್ಯಕರ್ತೆಯರಿಗೆ ಲಸಿಕೆಯನ್ನು ಮೊದಲ ದಿನ, ಒಂದು ತಿಂಗಳು, ಆರು ತಿಂಗಳು ಅವಧಿಯಲ್ಲಿ ನೀಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್ ಎನ್. ಡಬ್ಲ್ಯು.ಹೆಚ್.ಓ ಸರ್ವೇಕ್ಷಣಾ ವೈದ್ಯಾಧಿಕಾರಿ ಡಾ.ಅನಿಲ ಕುಮಾರ ತಾಳಿಕೋಟ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಜಿಲ್ಲಾ ಎನ್‌ವಿಬಿಡಿಸಿಪಿ ಅಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು, ವೈದ್ಯಾಧಿಕಾರಿಗಳು ತಾಲೂಕಾ ಅರೋಗ್ಯ ಮೇಲ್ವಿಚಾರಣಾ ಅಧಿಕಾರಿಗಳು, ಸಿಬ್ಬಂದಿಯವರು ಇದ್ದರು.

## ಬಸ್– ಟ್ರಕ್ ಡಿಕ್ಕಿ :18 ಮಂದಿ ಸಾವು

**ನವದೆಹಲಿ, ಜು.29–**ಜಾರ್ಖಂಡ್‌ನ ದಿಯೋಘರ್‌ನಲ್ಲಿ ಕನ್ವಾರಿಯಾಗಳನ್ನು ಸಾಗಿಸುತ್ತಿದ್ದ ಬಸ್ ಟ್ರಕ್‌ಗೆ ಡಿಕ್ಕಿ ಹೊಡೆದಿದ್ದು, 18 ಮಂದಿ ಸಾವನ್ನಪ್ಪಿದ್ದಾರೆ ಎಂದು ಬಿಜೆಪಿ ಸಂಸದ ಹೇಳಿದ್ದಾರೆ.ಜಾರ್ಖಂಡ್ ನ ದಿಯೋಘರ್ ಜಿಲ್ಲೆಯಲ್ಲಿ ಇಂದು ಬೆಳಿಗ್ಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ 18 ಮಂದಿ ಕನ್ವಾರಿಯಾಗಳು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ.ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯ ಪ್ರದೇಶದ ಬಳಿ ಕನ್ವಾರಿಯಾಗಳನ್ನು ಸಾಗಿಸುತ್ತಿದ್ದ ಬಸ್, ಗ್ಯಾಸ್ ಸಿಲಿಂಡರ್ ತುಂಬಿದ್ದ ವಾಹನಕ್ಕೆ ಡಿಕ್ಕಿ ಹೊಡೆದು ಈ ಘಟನೆ ಬೆಳಿಗ್ಗೆ 4:30 ರ ಸುಮಾರಿಗೆ ಸಂಭವಿಸಿದೆ.ಇನ್ಸ್‌ಪೆಕರ್ ಜನರಲ್(ದುಮ್ಕಾ ವಲಯ) ಶೈಲೇಂದ್ರ ಕುಮಾರ್ ಸಿನ್ಹಾ ಮಾಹಿತಿ ನೀಡಿ, ದಿಯೋಘರ್ ನ ಮೋಹನಪುರ ಪೊಲೀಸ್ ಠಾಣೆಯ ಜಮುನಿಯಾ ಅರಣ್ಯದ ಬಳಿ ಕನ್ವಾರಿಯಾಗಳನ್ನು ಸಾಗಿಸುತ್ತಿದ್ದ 32 ಆಸನಗಳ ಬಸ್ ಗ್ಯಾಸ್ ಸಿಲಿಂಡರ್ ತುಂಬಿದ್ದ ಟ್ರಕ್ ಡಿಕ್ಕಿ ಹೊಡೆದು 18 ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ ಎಂದು ತಿಳಿಸಿದ್ದಾರೆ.ಜಿಲ್ಲಾಡಳಿತಕ್ಕೆ ಮಾಹಿತಿ ನೀಡಲಾಗಿದ್ದು, ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಾಗಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H